ಸಂಪುಟ : 10 ಸಂಚಿಕೆ: 269 ಪುಟ : 4+2 ಬೆಲೆ: 3.00 ಮಂಗಳವಾರ ಡಿಸೆಂಬರ್ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 269 Pages : 4+2 Price : 3.00 Tuesday December 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ಅಣ್ಣಿಗೇರಿಯಲ್ಲಿ ಉಚಿತ ವೈದ್ಯಕೀಯ ಶಿಬಿರ

■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಪಟ್ಟಣದ ಆದಿದೈವ ಅಮೃತೇಶ್ವರ ಜಾತ್ರೆಯ ನಿಮಿತ್ತವಾಗಿ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇದೇ ಮಂಗಳವಾರ (ಡಿ. 9) ದಂದು ಬೆಳಿಗ್ಗೆ 9 ಗಂಟೆಗೆ ಉಚಿತ ವೈದ್ಯಕೀಯ ಶಿಬಿರ ಹಮ್ಮಿಕೊಳ್ಳಲಾಗಿದೆ.

ಅಣ್ಣಿಗೇರಿ ದೈವಜ್ಞ ಬ್ರಾಹ್ಮಣ ಅಕ್ಕಸಾಲಿಗ ಸಮಾಜ ಸೇವಾ ಸಂಸ್ಥೆ, ಜಿಲ್ಲಾ ಆರೋಗ್ಯ ಇಲಾಖೆ, ಹುಬ್ಬಳ್ಳಿ ವಿಹಾನ್ ಹಾರ್ಟ್ ಸೆಂಟರ್, ವಿಕೆರ್ ಸೂಪರ್ ಸ್ಪೆಷಾಲಿಟಿ ಹಾಸ್ಪಿಟಲ್ ಜಂಟಿಯಾಗಿ ಈ ಶಿಬಿರ ಆಯೋಜಿಸಿವೆ.

ಈ ಶಿಬಿರದಲ್ಲಿ ರೋಗಿಗಳಿಗೆ ಹೃದಯ, ಕಣ್ಣು, ಹಲ್ಲು, ಎಲುಬು ಕೀಲು, ಮಧು ಮೇಹ, ರಕ್ತದೊತ್ತಡ ಸೇರಿದಂತೆ ಹಲವಾರು ರೋಗಗಳ ಉಚಿತ ತಪಾಸಣೆ ಮಾಡಲಾಗುವುದು.

ಹೃದಯಕ್ಕೆ ಸಂಬಂಧಿಸಿದಂತೆ 2ಡಿ ಇಕೋ, ಇಸಿಜಿ ಪರೀಕ್ಷೆಗಳನ್ನು ಉಚಿತವಾಗಿ ಮಾಡುವುದರ ಜೊತೆಗೆ, ಕಣ್ಣು ಪರೀಕ್ಷೆಯಲ್ಲಿ ಅಗತ್ಯ ರೋಗಿಗಳಿಗೆ ಉಚಿತವಾಗಿ ಕನ್ನಡಕ ವಿತರಿಸಲಾಗುವುದು.

ಹುಬ್ಬಳ್ಳಿಯ ಹೃದಯ ತಜ್ಞ ಡಾ.ಗಣೇಶ ವೆರ್ಣೇಕರ, ಎಲುಬು ಕೀಲು ತಜ್ಞ ಡಾ ವಿವೇಕ ಪಾಟೀಲ, ದಂತ ವೈದ್ಯ ಡಾ ಮನೋಜ ಭಟ್ ಮತ್ತಿತರ ಅನುಭವಿ ತಜ್ಞ ವೈದ್ಯರು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ.

ಹೆಚ್ಚಿನ ವಿವರಗಳಿಗೆ ರವಿರಾಜ ವೆರ್ಣೇಕರ (ಮೊ. ಸಂಖ್ಯೆ: 94482 36529) ಅವರನ್ನು ಸಂಪರ್ಕಿಸಬಹುದು.

**ಚಳಿಗಾಲದ ಅಧಿವೇಶನ ಆರಂಭ | ಅಗಲಿದ ಗಣ್ಯರಿಗೆ ಸಂತಾಪ ಸೂಚನೆ | ಎಸ್.ಎಲ್. ಭೈರಪ್ಪನವರ ಸ್ಮಾರಕ ನಿರ್ಮಾಣ**

# ಸಾಲುಮರದ ತಿಮ್ಮಕ್ಕನವರ ಕೋರಿಕೆ ಈಡೇರಿಸಲು ಸರ್ಕಾರ ಪ್ರಯತ್ನಿಸಲಿದೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣ ವಿಧಾನಸೌಧ

ಸರ್ಕಾರದಿಂದ ಶತಾಯುಷಿ, ಪರಿಸರ ಪ್ರೇಮಿ ಸಾಲುಮರದ ತಿಮ್ಮಕ್ಕ ಹೆಸರಿನಲ್ಲಿ ಪ್ರಶಸ್ತಿ ಹಾಗೂ ಮೈಸೂರಿನಲ್ಲಿ ಕಾದಂಬರಿಕಾರ ಎಸ್.ಎಲ್. ಭೈರಪ್ಪನವರ ಸ್ಮಾರಕ ನಿರ್ಮಾಣ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸೋಮವಾರ ಆರಂಭವಾದ ಚಳಿಗಾಲದ ಅಧಿವೇಶನದಲ್ಲಿ ಇತ್ತೀಚೆಗೆ ನಿಧನರಾದ ವಿಧಾನ ಸಭೆಯ ಹಾಲಿ ಸದಸ್ಯ ಹೆಚ್.ವೈ. ಮೇಟಿ, (ಹುಲ್ಲಪ್ಪ ಯಮನಪ್ಪ ಮೇಟಿ) ಮಾಜಿ ಸದಸ್ಯ ಆರ್.ವಿ. ದೇವರಾಜ್, ಶಿವಶರಣಪ್ಪಗೌಡ ಪಾಟೀಲ್, ವೃಕ್ಷಮಾತೆ ಸಾಲಮರದ ತಿಮ್ಮಕ್ಕ, ಖ್ಯಾತ ಕಾದಂಬರಿಕಾರ ಎಸ್.ಎಲ್. ಭೈರಪ್ಪ ಹಾಗೂ ಕನ್ನಡ ಚಿತ್ರರಂಗದ ಖ್ಯಾತ ಹಾಸ್ಯನಟ ಎಂ.ಎಸ್. ಉಮೇಶ್ ಅವರಿಗೆ ಸಭಾಧ್ಯಕ್ಷ ಯು.ಟಿ. ಖಾದರ್ ಸಂತಾಪ ಸೂಚಿಸಿ ನಿರ್ಣಯ ಮಂಡಿಸಿದರು. ನಿರ್ಣಯ ಬೆಂಬಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು.

114 ವರ್ಷ ಜೀವಿಸಿದ್ದ ಸಾಲುಮರದ ತಿಮ್ಮಕ್ಕ ಮರ-ಗಿಡಗಳನ್ನೇ ತಮ್ಮ ಮಕ್ಕಳು ಎಂದು ಭಾವಿಸಿದ್ದರು. ಅವರ ಕೊನೆಗಾಲದಲ್ಲಿ ನಾನು ಭೇಟಿಯಾದ ಸಂದರ್ಭದಲ್ಲಿ ಬೇಲೂರು ಗ್ರಾಮದಲ್ಲಿ ವಸ್ತು ಸಂಗ್ರಹಾಲಯ ನಿರ್ಮಿಸುವಂತೆ ಪತ್ರ ನೀಡಿದ್ದರು. ಸರ್ಕಾರ ತಿಮ್ಮಕ್ಕನವರ ಕೋರಿಕೆ ಈಡೇರಿಸಲು ಪ್ರಯತ್ನಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.



ದೇಶ ಕಂಡ ಶ್ರೇಷ್ಠ ಸಾಹಿತಿ, ಕಾದಂಬರಿಕಾರ ಎಸ್.ಎಲ್. ಭೈರಪ್ಪನವರದು ಸರಳ ವ್ಯಕ್ತಿತ್ವ. 1999ರಲ್ಲಿ ಕನಕಪುರದಲ್ಲಿ ನಡೆದ 67ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳದ ಅಧ್ಯಕ್ಷರಾಗಿದ್ದರು. ಎಸ್.ಎಲ್. ಭೈರಪ್ಪನವರೊಂದಿಗೆ ಸೈದ್ಧಾಂತಿಕ ಭಿನ್ನಾಭಿಪ್ರಾಯ ಇದ್ದರೂ ಸಹ ಅವರ ಸಾಹಿತ್ಯಿಕ ಕೊಡುಗೆಗಳನ್ನು ವೈಯಕ್ತಿಕವಾಗಿ ಗೌರವದಿಂದ ಕಾಣುತ್ತಿದ್ದೆ. ಕೆಲವು ಕಾದಂಬರಿಗಳನ್ನು ಸಹ ಓದಿದ್ದೇನೆ. ಸರ್ಕಾರದ ವತಿಯಿಂದ ಮೈಸೂರಿನಲ್ಲಿ ಎಸ್.ಎಲ್. ಭೈರಪ್ಪನವರ ಸ್ಮಾರಕ ನಿರ್ಮಿಸುವುದಾಗಿ ಸಿಎಂ ಸಿದ್ದರಾಮಯ್ಯ ತಿಳಿಸಿದರು.

ಪತ್ರಕರ್ತ ವಿಶ್ವೇಶ್ವರ ಭಟ್ ಅವರ ಮನೆಯಲ್ಲಿ ಎಸ್.ಎಲ್. ಭೈರಪ್ಪ ತಮ್ಮ ಕೊನೆಯ ದಿನಗಳನ್ನು ಕಳೆದರು. ವಿಶ್ವವಾಣಿ ಪತ್ರಿಕೆ ವತಿಯಿಂದ ಆಯೋಜಿಸಿದ್ದ ಪ್ರವಾಸಿ ಪ್ರಪಂಚ ಕಾರ್ಯಕ್ರಮದಲ್ಲಿ ಭೈರಪ್ಪನವರನ್ನು ಭೇಟಿಯಾಗಿದ್ದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು.

ಹೆಚ್.ವೈ. ಮೇಟಿ ಎಲ್ಲಾ ಜಾತಿ-ಜನಾಂಗದ ಜನರ ಪ್ರೀತಿ ಅಭಿಮಾನವನ್ನು ಗಳಿಸಿದ್ದರು. 1983ರಿಂದ ನನಗೆ ಮೇಟಿ ಅವರ ಒಡನಾಟವಿದ್ದು, ನನ್ನ ನಿಷ್ಠಾವಂತ ಅನುಯಾಯಿಯಾಗಿದ್ದರು. ವೃತ್ತಿಯಲ್ಲಿ ಕೃಷಿಕರಾಗಿದ್ದ ಇವರು, ಬಿಲ್‌ಕೆರೂರು ಮಂಡಳ ಪಂಚಾಯಿತಿ ಅಧ್ಯಕ್ಷರಾಗುವ ಮೂಲಕ ರಾಜಕೀಯ ಪ್ರವೇಶಿಸಿದ್ದರು. 1989ರಲ್ಲಿ ಗುಳೇದಗುಡ್ಡ ವಿಧಾನಸಭಾ ಕ್ಷೇತ್ರದಿಂದ ಮೊದಲಬಾರಿಗೆ ವಿಧಾನಸಭೆಗೆ ಆಯ್ಕೆಯಾಗಿದ್ದರು ಎಂದರು.

ವಿಧಾನಸಭೆಯ ಮಾಜಿ ಸದಸ್ಯ ಆರ್.ವಿ. ದೇವರಾಜ್ 3 ಬಾರಿ ಶಾಸಕರಾಗಿದ್ದರಲ್ಲದೆ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದರು. 11ನೇ ವಿಧಾನಸಭೆ ಸದಸ್ಯರಾಗಿದ್ದ ಯಲಬುರ್ಗಾದ ಮಾಜಿ ▶▶3ನೇ ಪುಟಕ್ಕೆ

> ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲ ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿ, ಹೆಚ್.ವೈ. ಮೇಟಿ ಅವರು ಬಡವರ ಬಗ್ಗೆ ಹೆಚ್ಚಿನ ಕಾಳಜಿ ಹೊಂದಿದ್ದರು. ಜನಸಾಮಾನ್ಯರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸುತ್ತಿದ್ದರು ಎಂದು ಸ್ಮರಿಸಿದರು. ಸಾಲು ಮರದ ತಿಮ್ಮಕ್ಕ ಅವರ ಹೆಸರಿನಲ್ಲಿ ರಾಜ್ಯದ ಎಲ್ಲೆಡೆ ಉದ್ಯಾನವನ್ನು ನಿರ್ಮಿಸುವ ಮೂಲಕ ಅರಣ್ಯ ಇಲಾಖೆ ಶ್ಲಾಘನೀಯ ಕಾರ್ಯ ಮಾಡಿದೆ. ತಿಮ್ಮಕ್ಕ ಅವರ ಪುತ್ಥಳಿ ಸ್ಥಾಪಿಸುವುದು ಅಥವಾ ರಸ್ತೆಗೆ ಅವರ ಹೆಸರನ್ನಿಡುವುದು ಇಂತಹ ಕ್ರಮಗಳಿಗಿಂತಲೂ, ಉದ್ಯಾನವನಗಳನ್ನು ನಿರ್ಮಿಸಿ, ಅವುಗಳಿಗೆ ತಿಮ್ಮಕ್ಕನವರ ಹೆಸರು ಇಟ್ಟಿರುವುದು ಸಾರ್ಥಕವೆನಿಸಿದೆ ಎಂದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಮಹಿಳೆಯರ ಅಭಿವೃದ್ಧಿಗಾಗಿ ಸೇವೆ ಸಲ್ಲಿಸುತ್ತಿರುವ ವ್ಯಕ್ತಿ ಹಾಗೂ ಸಂಸ್ಥೆಗಳಿಂದ, ಕಲೆ, ಸಾಹಿತ್ಯ, ಕ್ರೀಡೆ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರಿಗೆ ಕಿತ್ತೂರು ಚೆನ್ನಮ್ಮ ಪ್ರಶಸ್ತಿಗಳನ್ನು ನೀಡಲಾಗುವುದು. ಮಹಿಳಾ ಅಭಿವೃದ್ಧಿ/ ಕಲ್ಯಾಣ ಕ್ಷೇತ್ರ ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಜೀವನೋಪಾಯದಿಂದ ಪಾರು ಮಾಡಿದಂತಹ ಮಹಿಳೆಯರನ್ನು ಗುರುತಿಸಿ ಸಾಹಸ ಪ್ರದರ್ಶಿಸಿ ಹೋರಾಡಿದ ಮಹಿಳೆಗೆ ವೀರ ಮಹಿಳೆ ಪ್ರಶಸ್ತಿಯನ್ನು ಸಹ ನೀಡಲಾಗುವುದು.

ಗದಗ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಿಂದ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಅವಿರತವಾಗಿ ಸೇವೆ ಸಲ್ಲಿಸುತ್ತಿರುವ ಅರ್ಹ ಸಂಸ್ಥೆಗಳು, ಕಿತ್ತೂರು ಚೆನ್ನಮ್ಮ ಪ್ರಶಸ್ತಿಗೆ ಹಾಗೂ ಇತರೆ ಐದು ಕ್ಷೇತ್ರಗಳಾದ ಕ್ರೀಡೆ, ಕಲೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಮಹಿಳೆಯರು ಕಿತ್ತೂರ ಚೆನ್ನಮ್ಮ ಪ್ರಶಸ್ತಿಗೆ ಹಾಗೂ ವೀರ ಮಹಿಳೆ ಪ್ರಶಸ್ತಿಗೆ ಅರ್ಹರಿರುವ ಮಹಿಳೆಯರಿಂದ ಪ್ರಶಸ್ತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿಗಾಗಿ ಆಯ್ಕೆಗೆ ನಿಗದಿಪಡಿಸಿರುವ ಷರತ್ತುಗಳು : ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿಗೆ ಅರ್ಜಿ ಸಲ್ಲಿಸುವ ಸ್ವಯಂ ಸೇವಾ ಸಂಸ್ಥೆ ಹಾಗೂ ವ್ಯಕ್ತಿಗಳು ಮಹಿಳೆಯರ ಅಭಿವೃದ್ಧಿಗಾಗಿ ಕನಿಷ್ಠ 5 ವರ್ಷಗಳ ಸೇವೆ ಸಲ್ಲಿಸಿರಬೇಕು. ಪ್ರಶಸ್ತಿಗೆ ಆಯ್ಕೆ ಮಾಡುವಾಗ ಸಂಸ್ಥೆ ಹಾಗೂ ವ್ಯಕ್ತಿ ಮಹಿಳಾ ಅಭಿವೃದ್ಧಿ ಕ್ಷೇತ್ರದಲ್ಲಿ ಕೈಗೊಂಡ ಕಾರ್ಯಕ್ರಮಗಳ ಮತ್ತು ಇತರೆ ಕ್ಷೇತ್ರಗಳಾದ ಕ್ರೀಡಾ, ಕಲೆ, ಸಾಹಿತ್ಯ, ಶಿಕ್ಷಣ ಕ್ಷೇತ್ರಗಳಲ್ಲೂ ವ್ಯಕ್ತಿಗಳು ಕೈಗೊಂಡ ಕಾರ್ಯಕ್ರಮಗಳ ನಿರ್ವಹಣೆಯ ಗುಣಮಟ್ಟವನ್ನು ಆಧಾರವಾಗಿಟ್ಟುಕೊಳ್ಳಲಾಗುತ್ತದೆ, ಕಿತ್ತೂರ ರಾಣಿ ಚೆನ್ನಮ್ಮ ಪ್ರಶಸ್ತಿಗೆ ವೇತನ ಪಡೆಯುತ್ತಿರುವ ವ್ಯಕ್ತಿಗಳು ಅರ್ಹರಾಗಿರುವುದಿಲ್ಲ, ಪ್ರಶಸ್ತಿಗೆ ಬರುವ ಅರ್ಜಿಗಳ ▶▶3ನೇ ಪುಟಕ್ಕೆ

**ಪಿಎಸ್‌ಐ ಈರಣ್ಣ ರಿತ್ತಿ ವರ್ಗಾವಣೆಗೆ ಆಗ್ರಹ**

# ಡಿ. 12ರಂದು ಶಿರಹಟ್ಟಿ ಬಂದ್‌ಗೆ ಕರೆ



> ರಿತ್ತಿ ಅವರನ್ನು ತಕ್ಷಣ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿ 12 ದಿನಗಳಿಂದ ಧರಣಿ ನಡೆಸಲಾಗುತ್ತಿದೆ. ಆದರೂ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ನಮ್ಮ ಬೇಡಿಕೆಗೆ ಸ್ಪಂದಿಸದ ಹಿನ್ನೆಲೆಯಲ್ಲಿ ಬಂದ್‌ಗೆ ಕರೆ ನೀಡಲಾಗಿದೆ. ಸಾರ್ವಜನಿಕರು ಈ ಹೋರಾಟವನ್ನು ಬೆಂಬಲಿಸಬೇಕು ಎಂದು ರಾಜು ಖಾನಪ್ಪನವರ ಮನವಿ ಮಾಡಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ಪಿಎಸ್‌ಐ ಈರಣ್ಣ ರಿತ್ತಿ ವರ್ಗಾವಣೆಗೆ ಒತ್ತಾಯಿಸಿ ಡಿ. 12ರಂದು ಶಿರಹಟ್ಟಿ ಬಂದ್‌ಗೆ ಕರೆ ನೀಡಲಾಗಿದೆ ಎಂದು ಶಿವರಾಮಕೃಷ್ಣ ಸೇವಾ ಸಮಿತಿ ಸಂಸ್ಥಾಪಕ ರಾಜು ಖಾನಪ್ಪನವರ ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಿಂದೂ ವಿರೋಧಿ ನಡೆ ಅನುಸರಿಸುತ್ತಿರುವ ಪಿಎಸ್‌ಐ ಈರಣ್ಣ ರಿತ್ತಿ ಅವರನ್ನು ವರ್ಗಾವಣೆ ಮಾಡುವಂತೆ ಒತ್ತಾಯಿಸಿ ಶಿರಹಟ್ಟಿ ತಹಸೀಲ್ದಾರರ ಕಚೇರಿ ಎದುರು 12 ದಿನಗಳಿಂದ ಧರಣಿ ನಡೆಸಲಾಗುತಿದೆ. ಆದರೆ ನಮ್ಮ ಹೋರಾಟಕ್ಕೆ ಸ್ಪಂದನೆ ಸಿಗದ ಹಿನ್ನೆಲೆಯಲ್ಲಿ ಡಿ. 12ರಂದು ಬಂದ್ ಕರೆ ನೀಡಲಾಗಿದೆ. ಶಿರಹಟ್ಟಿ ಪಟ್ಟಣದ ವ್ಯಾಪಾರಸ್ಥರು ತಮ್ಮ ಅಂಗಡಿಗಳನ್ನು ಬಂದ್ ಮಾಡಿ ಹೋರಾಟಕ್ಕೆ ಬೆಂಬಲ ಸೂಚಿಸಬೇಕು ಎಂದು ಒತ್ತಾಯಿಸಿದರು.

ಪಿಎಸ್‌ಐ ರಿತ್ತಿ ಮರಳು ದಂಧೆ, ಇಸ್ಪೀಟ್, ಗೋವುಗಳ ಹತ್ಯೆ ಸಹಿತ ಹಿಂದೂಗಳನ್ನೇ ಗುರಿಯಾಗಿಸಿಕೊಂಡು ಕೆಲಸ ಮಾಡುತ್ತಿದ್ದಾರೆ. ಈ ಹಿಂದೆ ಕನಕದಾಸ ಜಯಂತಿ ಸಂದರ್ಭದಲ್ಲಿಯೂ ಕುರುಬರು ಮತ್ತು ದಲಿತ ಯುವಕರ ಮೇಲೆ ಲಾಠಿ ಪ್ರಹಾರ ಮಾಡಿದ್ದರು. ಲಕ್ಷ್ಮೇಶ್ವರದಲ್ಲಿ ನಡೆದ ದುರ್ಗಾದೇವಿ ಮೆರಣಿಗೆಯಲ್ಲೂ ಗೋಸಾವಿ ಸಮಾಜದ ಯುವಕರ ಮೇಲೆ ಹಲ್ಲೆ ನಡೆಸಿದ್ದರು. ಈಗ ಲಂಬಾಣಿ ಸಮಾಜದ ಅಮಾಯಕ ಯುವಕನಿಗೆ ಮನಬಂದಂತೆ ಥಳಿಸಿ, ಹಣ ಕಿತ್ತುಕೊಂಡಿದ್ದಾರೆ ಎಂದು ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ನಾಗರಾಜ ಲಕ್ಕುಂಡಿ, ಫಕ್ಕಿರೇಶ ರಟ್ಟಿಹಳ್ಳಿ, ಸೋಮು ಗುಡಿ, ಜಾನು ಲಮಾಣಿ, ಸಂತೋಷ ಕೋಡಕರ್, ಸತೀಶ ಕುಂಬಾರ, ಶಿವು ಲಮಾಣಿ, ರಾಮಣ್ಣ ಕಂಬಳಿ ಇತರರು ಇದ್ದರು.

**ಗೋಹತ್ಯೆ ಕಾಯಿದೆ ತಿದ್ದುಪಡಿಗೆ ಕೂಡಲಸಂಗಮ ಶ್ರೀ ವಿರೋಧ; ನಾಳೆ ಲಿಂಗಾಯತ ದೌರ್ಜನ್ಯ ದಿನಾಚರಣೆ**

# ಯಾವುದೇ ಜನಾಂಗದ ಹೋರಾಟವನ್ನು ಹತ್ತಿಕ್ಕಬೇಡಿ




■ವಿಜಯಸಾಕ್ಷಿ ಸುದ್ದಿ, ಗದಗ

ಗೋಹತ್ಯೆ ನಿಷೇಧ ಕಾಯಿದೆಗೆ ತಿದ್ದುಪಡಿ ತರುವ ಮೂಲಕ ಗೋಹತ್ಯೆಗೆ ಪೂರಕವಾದ ವಾತಾವರಣ ನಿರ್ಮಿಸುವುದನ್ನು ನಾವು ತೀವ್ರವಾಗಿ ವಿರೋಧಿಸುತ್ತೇವೆ. ಹಾಗೆಯೇ, ಕಳೆದ ಬಾರಿ ಮೀಸಲಾತಿ ಹೋರಾಟದ ವೇಳೆ ನಡೆದ ಲಾಠಿಚಾರ್ಜ್ ಖಂಡಿಸಿ ಡಿ. 10ರಂದು ಬೆಳಗಾವಿಯಲ್ಲಿ 'ಲಿಂಗಾಯತ ದೌರ್ಜನ್ಯ ದಿನ' ಆಚರಿಸಲಾಗುವುದು ಎಂದು ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರು ಬಸವಜಯ ಮೃತ್ಯುಂಜಯ ಸ್ವಾಮೀಜಿ ತಿಳಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೋಹತ್ಯೆಯನ್ನು ನಿಷೇಧಿಸಬೇಕು ಎಂಬುದು ಕನ್ನಡಿಗರು ▶▶3ನೇ ಪುಟಕ್ಕೆ

> ಎಷ್ಟೇ ಲಾಠಿ ಏಟು, ಬೂಟಿನ ಏಟು ಕೊಟ್ಟರೂ ಅಥವಾ ಗೋಲಿಬಾರ್ ಮಾಡಿದರೂ ನ್ಯಾಯ ಸಿಗುವವರೆಗೂ ನಮ್ಮ ಹೋರಾಟ ನಿರಂತರವಾಗಿರುತ್ತದೆ. ಸರ್ಕಾರ ದ್ವೇಷದಿಂದ ಹೋರಾಟ ಹತ್ತಿಕ್ಕಲು ನೋಡಿದರೆ ನಾವು ಪ್ರೇಮ, ಶಾಂತಿ ಮತ್ತು ನ್ಯಾಯದ ಮೂಲಕ ಹೋರಾಟ ಮುಂದುವರಿಸುತ್ತೇವೆ. ಬೆಳಗಾವಿಯ ಅದೇ ಸ್ಥಳದಿಂದ ಮತ್ತೊಮ್ಮೆ ಹೋರಾಟದ ಸಂಕಲ್ಪ ಮಾಡುತ್ತೇವೆ ಎಂದು ಶ್ರೀಗಳು ಸ್ಪಷ್ಟಪಡಿಸಿದರು.

**ಪತ್ರಿಕಾಗೋಷ್ಠಿಯಲ್ಲಿ ನಾಯಕ ನಟ ಝೈದ್ ಖಾನ್ ಮಾಹಿತಿ**

# ಜ. 23ರಂದು 'ಕಲ್ಟ್' ಚಿತ್ರ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಯಾಂಡಲ್‌ವುಡ್‌ನಲ್ಲಿ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡು ನಿರ್ಮಾಣ ಮಾಡಿರುವ 'ಕಲ್ಟ್' ಚಿತ್ರವನ್ನು ಗೆಲ್ಲಿಸಲು ರಾಜ್ಯಾದ್ಯಂತ ಪ್ರವಾಸ ಮಾಡುತ್ತಿದ್ದೇನೆ. ಚಿತ್ರ 2026ರ ಜನವರಿ 23ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ ಎಂದು ಚಿತ್ರದ ನಾಯಕ ನಟ ಹಾಗೂ ಸಚಿವ ಜಮೀರ್ ಅಹ್ಮದ್ ಖಾನ್ ಪುತ್ರ ಝೈದ್ ಖಾನ್ ತಿಳಿಸಿದರು.




ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕಲ್ಟ್' ಚಿತ್ರವು ಖಂಡಿತ ಹಿಟ್ ಆಗಲಿದೆ. ಚಿತ್ರದ ಶೇ. 40ರಷ್ಟು ಭಾಗವನ್ನು ಹಂಪಿ ಪರಿಸರದಲ್ಲಿ ಚಿತ್ರೀಕರಿಸಲಾಗಿದೆ. ಚಿತ್ರದ ನಾಯಕಿ ರಚಿತಾರಾಮ್ ಅವರ ಸ್ವಂತ ಊರು ಹಂಪಿ ಎಂದು ಈ ಚಿತ್ರದಲ್ಲಿ ಹೇಳಲಾಗಿದೆ. ಇನ್ನು ಕ್ಲೈಮಾಕ್ಸ್, ಹಾಡುಗಳನ್ನು ಕೂಡ ಹಂಪಿಯಲ್ಲೇ ಚಿತ್ರೀಕರಿಸಲಾಗಿದೆ. ಬಾಲಿವುಡ್ ನಟಿ ಮಲ್ಲೈಕಾ ಕೂಡಾ ಈ ಚಿತ್ರದಲ್ಲಿ ನಟಿಸಿದ್ದಾರೆ ಎಂದರು.

ಕೆವಿಎನ್ ಪ್ರೊಡಕ್ಷನ್ಸ್ ಹಾಗೂ ಲೋಕಿ ಸಿನಿಮಾಸ್ ಲಾಂಛನದಲ್ಲಿ ನಿರ್ಮಾಣವಾಗುತ್ತಿರುವ 'ಕಲ್ಟ್' ಚಿತ್ರವನ್ನು ಅನಿಲ ಕುಮಾರ ನಿರ್ದೇಶಿಸಿದ್ದಾರೆ. ಜೆ.ಎಸ್. ವಾಲಿ ಛಾಯಾಗ್ರಹಣ, ಅರ್ಜುನ್ ಜನ್ಯ ಸಂಗೀತ ನಿರ್ದೇಶನ, ಕೆ.ಎಂ. ಪ್ರಕಾಶ್ ಸಂಕಲನ ಹಾಗೂ ರವಿವರ್ಮ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ. ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿರುವ ಈ ಚಿತ್ರ ಖಂಡಿತ ಯಶಸ್ಸು ಕಾಣುವ ವಿಶ್ವಾಸವಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ನಜೀರ್ ಅಹ್ಮದ್ ಡಂಬಳ, ಕೃಷ್ಣಾ, ಸಾದಿಕ್ ನರಗುಂದ, ಅಂದಾನಯ್ಯ ಕುರ್ತಕೋಟಿಮಠ ಸೇರಿದಂತೆ ಇತರರು ಇದ್ದರು.

### ರಾಜಕೀಯ ಒಲ್ಲೆ

> ಭವಿಷ್ಯದಲ್ಲಿ ಸಿನಿಮಾ ಜೊತೆಗೆ ರಾಜಕೀಯಕ್ಕೂ ಪ್ರವೇಶಿಸುವ ಇಚ್ಛೆಯಿದೆಯೇ ಎಂಬ ಪತ್ರಕರ್ತರ ಪ್ರಶ್ನೆಗೆ ಪ್ರಶ್ನೆಗೆ ಉತ್ತರಿಸಿದ ಝೈದ್ ಖಾನ್, ನನ್ನ ತಂದೆ ಸಕ್ರಿಯ ರಾಜಕಾರಣದಲ್ಲಿ ಇದ್ದಾರೆ. ಆದರೆ ನನಗೆ ರಾಜಕೀಯ ಇಷ್ಟವಿಲ್ಲ. ಉದ್ಯಮ, ಸಿನಿಮಾ ಕ್ಷೇತ್ರದಲ್ಲಿ ಇದ್ದುಕೊಂಡೇ ಸಮಾಜ ಸೇವೆ ಮಾಡುವೆ ಎಂದು ಉತ್ತರಿಸಿದರು.

## 'ಸಿಎಂ ಹುದ್ದೆಗೆ 500 ಕೋಟಿ' : ಚರ್ಚೆಗೆ ಕಾರಣವಾದ ನವಜೋತ್ ಕೌರ್ ಹೇಳಿಕೆ; ಕಾಂಗ್ರೆಸ್ ಮೇಲೆ ಮುಗಿಬಿದ್ದ ಎಎಪಿ, ಬಿಜೆಪಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

"ಐನೂರು ಕೋಟಿ ರೂಪಾಯಿಯ ಸೂಟ್‌ಕೇಸ್ ಕೊಡುವವರು ಸಿಎಂ ಆಗುತ್ತಾರೆ" ಎಂಬ ಪಕ್ಷದ ನಾಯಕ ನವಜೋತ್ ಸಿಂಗ್ ಸಿಧು ಅವರ ಪತ್ನಿ ನವಜೋತ್ ಕೌರ್ ಅವರ ಹೇಳಿಕೆ ಕುರಿತು ಸ್ಪಷ್ಟನೆ ನೀಡುವಂತೆ ಪಂಜಾಬ್‌ನ ಎಎಪಿ ಮತ್ತು ಬಿಜೆಪಿ ಪಕ್ಷಗಳು ಕಾಂಗ್ರೆಸ್ ಅನ್ನು ಒತ್ತಾಯಿಸಿವೆ.

ಶನಿವಾರ (ಡಿಸೆಂಬರ್ 6) ಚಂಡೀಗಢದಲ್ಲಿ ರಾಜ್ಯಪಾಲ ಗುಲಾಬ್ ಚಂದ್ ಕಟಾರಿಯಾ ಅವರನ್ನು ಭೇಟಿಯಾದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ನವಜೋತ್ ಕೌರ್, ಚರ್ಚೆ ಕಾರಣವಾದ ಹೇಳಿಕೆ ನೀಡಿದ್ದಾರೆ.

"ನನ್ನ ಪತಿ ಕಾಂಗ್ರೆಸ್ ಜೊತೆ ಬಲವಾಗಿ ನಿಂತಿದ್ದಾರೆ. ಪಕ್ಷ ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸಿದರೆ, ಅವರು ಸಕ್ರಿಯ ರಾಜಕಾರಣಕ್ಕೆ ಮರಳುತ್ತಾರೆ" ಎಂದು ಮಾಜಿ ಶಾಸಕಿಯೂ ಆದ ನವಜೋತ್ ಕೌರ್ ಮಾಧ್ಯಮಗಳ ಮುಂದೆ ಹೇಳಿದ್ದರು.

"ಆದರೂ, ಸಿಧು ಅವರನ್ನು ಮುಖ್ಯಮಂತ್ರಿ ಅಭ್ಯರ್ಥಿಯಾಗಿ ಘೋಷಿಸುವ ನಿರೀಕ್ಷೆ ನನಗಿಲ್ಲ. ಏಕೆಂದರೆ, ಕಾಂಗ್ರೆಸ್‌ನಲ್ಲಿ ಈಗಾಗಲೇ ಐದು ಮಂದಿ ಸಿಎಂ ಸ್ಥಾನದ ಆಕಾಂಕ್ಷಿಗಳಿದ್ದಾರೆ. ಅವರೆಲ್ಲ ಕಾಂಗ್ರೆಸ್ ಅನ್ನು ಸೋಲಿಸಲು ಪಣತೊಟ್ಟು ನಿಂತಿದ್ದಾರೆ. ಇದನ್ನು ಕಾಂಗ್ರೆಸ್ ಹೈಕಮಾಂಡ್ ಅರ್ಥ ಮಾಡಿಕೊಂಡರೆ, ಅದು ಬೇರೆ ವಿಷಯ" ಎಂದಿದ್ದರು.

"ನಾವು ಯಾವಾಗಲೂ ಪಂಜಾಬ್ ಪರವಾಗಿ ಮಾತನಾಡುತ್ತೇವೆ. ಆದರೆ, ಮುಖ್ಯಮಂತ್ರಿ ಕುರ್ಚಿಯನ್ನು ಭದ್ರಪಡಿಸಿಕೊಳ್ಳಲು ನಮ್ಮಲ್ಲಿ 500 ಕೋಟಿ ರೂಪಾಯಿ ಹಣವಿಲ್ಲ" ಎಂದು ಇದೇ ವೇಳೆ ನವಜೋತ್ ಕೌರ್ ಹೇಳಿದ್ದರು.

### ಹಿರಿಯ, ಅನುಭವಿ ಕಾರ್ಯಕರ್ತನನ್ನು, ಸಮಾಜ ಸೇವಕನನ್ನು ಕಳೆದುಕೊಂಡ ಗದಗ

# ಶ್ರೀಕೃಷ್ಣ ಹೊಂಬಾಳಿಯವರಿಗೆ ಭಾವಪೂರ್ಣ ಶ್ರದ್ಧಾಂಜಲಿ



ಭಾರತೀಯ ಜನತಾ ಪಾರ್ಟಿಯ ಹಿರಿಯರು, ಅಖಂಡ ಧಾರವಾಡ ಜಿಲ್ಲೆಯ ಬಿ.ಜೆ.ಪಿ ಮಾಜಿ ಜಿಲ್ಲಾಧ್ಯಕ್ಷ ಶ್ರೀಕೃಷ್ಣ ಹೊಂಬಾಳಿಯವರ ನಿಧನ ಅಸಂಖ್ಯಾತ ಕಾರ್ಯಕರ್ತರಲ್ಲಿ, ಅಖಂಡ ಧಾರವಾಡ ಜಿಲ್ಲೆಯ ಜನರಿಗೆ ಅತ್ಯಂತ ದುಃಖವನ್ನು ತಂದಿದೆ.

ಅತ್ಯಂತ ಸರಳ ಮತ್ತು ಸಜ್ಜನ ವ್ಯಕ್ತಿಯಾದ ಶ್ರೀಕೃಷ್ಣ ಹೊಂಬಾಳಿ ಅವರು ಭಾರತೀಯ ಜನತಾ ಪಾರ್ಟಿಯ ಹಿರಿಯ ನಾಯಕರೊಂದಿಗೆ ಒಡನಾಟ ಹೊಂದಿದವರು. ಶ್ರೀಕೃಷ್ಣ ಹೊಂಬಾಳಿಯವರ ತಂದೆಯವರಾದ ಪದ್ಮನಾಭಾಚಾರ ಹೊಂಬಾಳಿ ಇವರು ಜನಸಂಘದ ಕಾಲದಿಂದಲೂ ರಾಜಕಾರಣದಲ್ಲಿ ಗುರುತಿಸಿಕೊಂಡವರು.

ಶ್ರೀಕೃಷ್ಣ ಹೊಂಬಾಳಿಯವರು ಗದಗ ನಗರಕ್ಕೆ ಗಣಪತಿ ಹಬ್ಬ ಬಂದಾಗ ಜಗನ್ನಾಥ್ ರಾವ್ ಜೋಶಿ ಅವರ ಮನೆಗೆ ಭೇಟಿ ಕೊಡದೆ ಹೋಗುತ್ತಿರಲಿಲ್ಲ. ಅವರ ತಾಯಿಯವರಾದ ತಾರಾಬಾಯಿಯವರು ಬಹುತೇಕ ಮುಖಂಡರಿಗೆ ಊಟದ ವ್ಯವಸ್ಥೆಯನ್ನು ಮಾಡುತ್ತಿದ್ದರು. ಪ್ರಮೋದ್ ಮಹಾಜನ್, ಲಾಲ್‌ಕೃಷ್ಣ ಅಡ್ವಾನಿ ಅವರ ಮನೆಗೆ ಭೇಟಿ ನೀಡಿದ್ದರು. ಅನಂತ್ ಕುಮಾರ್ ಅವರ ಒಡನಾಡಿ ಶ್ರೀಕೃಷ್ಣ ಹೊಂಬಾಳಿ, ಅನಂತ್ ಕುಮಾರ್‌ರ ಆತ್ಮೀಯ ಗೆಳೆಯರೂ ಸಹ ಹೌದು.

ಅನಂತ್ ಕುಮಾರ್ ಗದಗ ನಗರಕ್ಕೆ ಬಂದರೆ ತೋಂಟದಾರ್ಯ ಮಠದ ಮುಂದಿನ ಮಿರ್ಚಿಯನ್ನು ಹೊಂಬಾಳಿಯವರ ಗದಗ ಪ್ರಿಂಟಿಂಗ್ ಪ್ರೆಸ್‌ಗೆ ತರಿಸಲೇಬೇಕಿತ್ತು. ಪಕ್ಷದ ಸಂಘಟನೆ ಇಲ್ಲದ ಕಾಲದಲ್ಲಿ ಅನಂತ್ ಕುಮಾರ್‌ರೊಂದಿಗೆ ವಿವಿಧ ಜವಾಬ್ದಾರಿಗಳನ್ನು ಪಡೆದುಕೊಂಡು ಪಕ್ಷ ಸಂಘಟನೆ ಮಾಡಿದವರು.

ಗದಗ-ಬೆಟಗೇರಿ ನಗರಸಭೆಯ ಸದಸ್ಯರಾಗಿ ಶ್ರೀಕೃಷ್ಣ ಹೊಂಬಾಳಿಯವರು ಅಂದಿನ ಕಾಲದಲ್ಲಿ ಅತ್ಯಂತ ಹೆಮ್ಮೆಪಡುವಂತಹ ಕೆಲಸವನ್ನು ಮಾಡಿದ್ದಾರೆ. ಗದಗ ನಗರದ ಮರಾಠ ವಾಂಗಮಯ ಪ್ರೇಮಿ ಮಂಡಳದ ಎದುರಿಗೆ ಇರುವ ರಸ್ತೆಗೆ ನಗರಸಭೆಯಿಂದ ವೀರ ಸಾವರ್ಕರ್ ರಸ್ತೆ ಎಂದು ನಾಮಕರಣ ಮಾಡಿದ್ದು, ಆ ವಿಷಯವಾಗಿ ಅಂದಿನ ಆಡಳಿತಕ್ಕೆ ಮನವರಿಕೆ ಮಾಡಿಕೊಟ್ಟು ಈ ಕಾರ್ಯವನ್ನು ನಿರ್ವಹಿಸಿದ ಕೀರ್ತಿ ಶ್ರೀಕೃಷ್ಣ ಹೊಂಬಾಳಿ ಅವರಿಗೆ ಸಲ್ಲುತ್ತದೆ.

ವಿಜಯ ಸಂಕೇಶ್ವರ ಅವರ ಪರವಾಗಿ ಚುನಾವಣೆಯಲ್ಲಿ ಮತ್ತು ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿಯವರ ಪರವಾಗಿ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯ ನೇತೃತ್ವವನ್ನು ವಹಿಸಿಕೊಂಡು ಕೆಲಸ ಮಾಡಿದವರು. ಸಿದ್ಧಾಂತಕ್ಕೆ ಬದ್ಧರಾದ ಹಿರಿಯ ಕಾರ್ಯಕರ್ತ ಹೊಂಬಾಳಿಯವರನ್ನು ಭಾರತೀಯ ಜನತಾ ಪಾರ್ಟಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಾಗ ಗದಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರನ್ನಾಗಿ ಸರ್ಕಾರ ನೇಮಿಸಿತ್ತು. ಜನಪ್ರಿಯರಾದ ಶ್ರೀಕೃಷ್ಣ ಹೊಂಬಾಳಿಯವರು ಎಲ್ಲರಿಗೂ ಅಚ್ಚುಮೆಚ್ಚಿನ ನಾಯಕರಾಗಿದ್ದರು.

ಅವರ ನಿಧನದ ಸುದ್ದಿ ತಿಳಿದ ತಕ್ಷಣ ನೂರಾರು ಕಾರ್ಯಕರ್ತರು ಅವರ ಮನೆಗೆ ಧಾವಿಸಿ ಬಂದರು. ಕಾರ್ಯಕರ್ತರ ಮಗಳ ಮದುವೆ ಸಂಭ್ರಮದಲ್ಲಿದ್ದ ಮಾಜಿ ಸಚಿವರಾದ ಕಳಕಪ್ಪ ಬಂಡಿ ಅವರು ತಕ್ಷಣ ಕೃಷ್ಣ ಹೊಂಬಾಳಿಯವರ ಮನೆಗೆ ಭೇಟಿ ನೀಡಿದರು. ಮಾಜಿ ಮುಖ್ಯಮಂತ್ರಿಗಳು, ಸಂಸದರಾದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರು, ಶಾಸಕರಾದ ಸಿ.ಸಿ. ಪಾಟೀಲ್, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧ್ಯಕ್ಷರಾದ ರಾಜು ಕುರುಡಗಿ ಸೇರಿದಂತೆ ನೂರಾರು ಕಾರ್ಯಕರ್ತರು ಶ್ರೀಕೃಷ್ಣ ಹೊಂಬಾಳಿ ಅವರ ನಿಧನ ಭಾರತೀಯ ಜನತಾ ಪಾರ್ಟಿಗೆ ತುಂಬಲಾರದ ನಷ್ಟವಾಗಿದೆ ಎಂದು ಕಂಬನಿ ಮಿಡಿದಿದ್ದಾರೆ. ಶ್ರೀಕೃಷ್ಣ ಹೊಂಬಾಳಿಯವರ ಅಗಲುವಿಕೆಯಿಂದ ಗದಗ ನಗರ ಒಬ್ಬ ಹಿರಿಯ, ಅನುಭವಿ ಕಾರ್ಯಕರ್ತನನ್ನು, ಸಮಾಜ ಸೇವಕನನ್ನು ಕಳೆದುಕೊಂಡಂತಾಗಿದೆ.

– ನಾಗರಾಜ್ ಕುಲಕರ್ಣಿ.

### ಶ್ರೀ ಗುರು ಪುಟ್ಟರಾಜ ಕಲಾ ಪೋಷಕ ಸಂಘದ ಪ್ರಥಮ ಸಭೆಯಲ್ಲಿ ಎಫ್.ವ್ಹಿ. ಮರಿಗೌಡ್ರ ಮಾಹಿತಿ

# ಡಿ. 13, 14ರಂದು 'ಮುತ್ತಾಳ ಮಾವ' ನಾಟಕ ಪ್ರದರ್ಶನ




ಶ್ರೀ ಗುರು ಪುಟ್ಟರಾಜ ಕಲಾಪೋಷಕ ಸಂಘದ ಅಧ್ಯಕ್ಷ ನಜೀರಸಾಬ್ ಮಜ್ಜಗಿ ಮಾತನಾಡಿ, ಎಫ್.ವ್ಹಿ. ಮರಿಗೌಡ್ರ ಕಲಾಪೋಷಕ ಸಂಘಕ್ಕಾಗಿ ಸಾಕಷ್ಟು ಶ್ರಮ ವಹಿಸಿದ್ದಾರೆ. ಅವರಿಗೆ ಸಾಥ್ ಕೊಡುವ ಕೆಲಸವನ್ನು ನಾವೆಲ್ಲರೂ ಮಾಡುತ್ತಾ ಬಂದಿದ್ದು, ಈಗ ಅವರ ಮಾರ್ಗದರ್ಶನದಲ್ಲಿ ಸಂಘದ ಸದಸ್ಯರು ಪುಟ್ಟರಾಜ ಕಲಾಪೋಷಕ ಸಂಘವನ್ನು ಮತ್ತಷ್ಟು ಉನ್ನತಮಟ್ಟಕ್ಕೆ ಬೆಳೆಸೋಣ. ಜೊತೆಗೆ, ರಂಗಭೂಮಿ ಕಲೆಯನ್ನು ಮುಂದಿನ ಪೀಳಿಗೆಯವರೆಗೂ ತೆಗೆದುಕೊಂಡು ಹೋಗುವ ಪ್ರಯತ್ನ ಮಾಡೋಣ ಎಂದರು.

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಗುರು ಪುಟ್ಟರಾಜ ಕಲಾಪೋಷಕ ಸಂಘದ ಸಹಾಯಾರ್ಥವಾಗಿ ಡಿಸೆಂಬರ್ 13 ಮತ್ತು 14ರಂದು 'ಮುತ್ತಾಳ ಮಾವ' ಎನ್ನುವ ನಾಟಕ ಪ್ರದರ್ಶನಗೊಳ್ಳಲಿದ್ದು, ತನ್ನ ಅಭಿನಯದ ಮೂಲಕವೇ ರಾಜ್ಯದ ಮನೆಮಾತಾಗಿರುವ ಚಿತ್ರನಟಿ ಮಂಥನಾ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಭೂಮರಡ್ಡಿ ಕೌಂಪೌಂಡ್‌ನಲ್ಲಿನ ಶ್ರೀ ಗುರು ಸಿದ್ದಲಿಂಗೇಶ್ವರ ನಾಟಕ ಕಂಪನಿಯಲ್ಲಿ ನಾಟಕ ಪ್ರದರ್ಶನಗೊಳ್ಳಲಿದೆ ಎಂದು ಶ್ರೀ ಗುರು ಪುಟ್ಟರಾಜ ಕಲಾಪೋಷಕ ಸಂಘದ ಗೌರವಾಧ್ಯಕ್ಷ ಎಫ್.ವ್ಹಿ. ಮರಿಗೌಡ್ರ ತಿಳಿಸಿದರು.

ನಗರದ ಚನ್ನಮ್ಮ ಭವನದಲ್ಲಿ ಶ್ರೀ ಗುರು ಪುಟ್ಟರಾಜ ಕಲಾ ಪೋಷಕ ಸಂಘದ ಪ್ರಥಮ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಮ್ಮದು ಹೋರಾಟದ ಸಂಘವಲ್ಲ. ರಂಗಭೂಮಿ ಕಲೆಯನ್ನು ಉಳಿಸುವ ಸಂಘವಾಗಿದೆ. ಕಳೆದ 10 ವರ್ಷದಿಂದ ಪುಟ್ಟರಾಜ ಕಲಾಪೋಷಕ ಸಂಘವನ್ನು ಬೆಳೆಸಿದ್ದೇವೆ. ಕೊರೋನಾ ಸಮಯದಲ್ಲಿ ವೀರೇಶ್ವರ ಪಂಚಾಕ್ಷರ ಮಠದಿಂದ ದವಸ-ಧಾನ್ಯ ಸಂಗ್ರಹಿಸಿ ಕಲಾವಿದರಿಗೆ ಸಹಾಯ ಮಾಡಿದ್ದೇವೆ. ರಂಗಭೂಮಿ ಕಲೆಯನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಆ ನಿಟ್ಟಿನಲ್ಲಿ ಶ್ರೀ ಗುರು ಪುಟ್ಟರಾಜ ಕಲಾಪೋಷಕ ಸಂಘ ಕಾರ್ಯನಿರ್ವಹಿಸುತ್ತಿದೆ ಎಂದರು.

ಈ ಸಂದರ್ಭದಲ್ಲಿ ಸಿದ್ದಲಿಂಗಪ್ಪ ಅರಳಿ, ಸಂಗಮೇಶ ಬಿಳಗಿ, ಪ್ರಭುಸ್ವಾಮಿ ಹಿರೇಮಠ, ಅಮರೇಶ್ ನಾಗೂರ, ಮುಸ್ತಾಕ್ ಡಾಲಾಯತ್, ಬಾಬುಗೌಡ ಪಾಟೀಲ್, ಮಹೇಂದ್ರ ಪಾಲರೇಶಾ, ಶರೀಫ ಬಿಳೆಯಲಿ, ಕುಮಾರ ಅರಳಿಹಳ್ಳಿ, ಪಾಪು ಲಿಂಗರಾಜ ಕಲ್ಲೂರ, ದುದ್ದುಗೌಡ ಪಾಟೀಲ, ಮಹಾಂತೇಶ್ ಚನ್ನಣ್ಣವರ್, ವಿನಾಯಕ ಕೌಜಗೇರಿ, ಮಹಾದೇವ ಹೊಸೂರ, ಪಂಚು ಹೂಗಾರ, ಮಹಾಂತೇಶ್ ಸಜ್ಜನರ, ಆನಂದ್ ಬೆಂಗಳೂರು, ಧರ್ಮರಾಜ್ ಈರಪ್ಪ ನಾಗಠಾಣ, ರಮೇಶ ಮುಮಡವಾಡ, ಸುದೀರಸಿಂಗ್ ದೊಡ್ಡಮನಿ, ಅಮರಗುಂಡಪ್ಪ ಬಿಜ್ಜಲ್, ರಾಘವೇಂದ್ರ ಎಸ್.ಕೊಳ್ಳಿ, ಹಜರೆಸಾಬ್ ಚಿತ್ತವಾಡಗಿ, ಮಂಟೇಶ ಕಲ್ಲೂರ, ರವಿ ಹುಚ್ಚಣ್ಣನವರ, ಖಾಸೀಮಸಾಬ್ ಹವಾಲ್ದಾರ್, ಇಲಿಯಾಸ್ ಹೊಸಪೇಟೆ, ಆನಂದ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ಜೋಡ ಮಾರುತಿ ಸನ್ನಿಧಿಯಲ್ಲಿ ದೀಪೋತ್ಸವ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಿಲ್ಲಾ ಓಣಿಯ ಶ್ರೀ ಜೋಡ ಹನಮಂತ ದೇವಸ್ಥಾನದದಲ್ಲಿ ಕಾರ್ತಿಕ ದೀಪೋತ್ಸವ ವಿಜೃಂಭಣೆಯಿಂದ ಜರುಗಿತು. ಬೆಳಿಗ್ಗೆ ಮಾರುತಿ ದೇವರಿಗೆ ಅಭಿಷೇಕ, ವಿಶೇಷ ಅಲಂಕಾರ ನೆರವೇರಿಸಲಾಯಿತು. ಸಾಯಂಕಾಲ ದೇವಸ್ಥಾನಕ್ಕೆ ಹೂವಿನ ಅಲಂಕಾರ, ವಿದ್ಯುತ್ ದೀಪಾಲಂಕಾರಗಳೊಂದಿಗೆ ಹಿರಿಯರಾದ ಪ್ರಮೋದ ವಿ.ರಾಯ್ಕರ್ ಅವರು ದೀಪ ಬೆಳಗುವುದರ ಮೂಲಕ ದೀಪೋತ್ಸವಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಟ್ರಸ್ಟಿಗಳಾದ ರಾಮಣ್ಣ ಬಾಕಳೆ, ಆನಂದ ಸರ್ವದೆ, ನಿರಂಜನ ಓಝಾ, ಅಂಬಾಲಾಲ ಖೋಡೆ, ಬಸವರಾಜ ಪೂಜಾರ, ಓಣಿಯ ಹಿರಿಯರಾದ ಅರ್ಜುನಸಾ ಬದಿ, ವಿಜಯಣ್ಣ ಚಿಕ್ಕೊಪ್ಪ, ಸುಧೀರ ಕಾಟೀಗರ, ಮಹಾಂತಯ್ಯ ಕನಕಾರಿಮಠ, ಮಾರುತಿ ವಾಯ್.ತೇರದಾಳ, ಮನೋಹರ ದಲಬಂಜನ, ಸುನೀಲ ಬಸವಾ, ಸತೀಶ ಮಾನ್ವಿ, ರಾಜು ಮಗಜಿ ಸೇರಿದಂತೆ ಅಪಾರ ಸದ್ಭಕ್ತರು ದೀಪೋತ್ಸವದಲ್ಲಿ ಪಾಲ್ಗೊಂಡು ಪ್ರಸಾದ ಸ್ವೀಕರಿಸಿದರು.

## ಅನ್ನಭಾಗ್ಯ ಅಕ್ಕಿ ಅಕ್ರಮ ಸಂಗ್ರಹ, ಮಾರಾಟ ; 570 ಜನರ ಬಂಧನ : ಸಚಿವ ಕೆ.ಎಚ್ ಮುನಿಯಪ್ಪ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ- (ಸುವರ್ಣ ವಿಧಾನಸೌಧ)

ಅನ್ನಭಾಗ್ಯ ಪಡಿತರ ಅಕ್ಕಿಯ ಅಕ್ರಮ ಸಂಗ್ರಹ ಮತ್ತು ಮಾರಾಟ ಪ್ರಕರಣಗಳಿಗೆ ಸಂಬಂಧಿಸಿದಂತೆ 461 ಎಫ್‌ಐಆರ್‌ಗಳನ್ನು ದಾಖಲಿಸಿ, 570 ಜನರನ್ನು ಬಂಧಿಸಲಾಗಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್ ಮುನಿಯಪ್ಪ ಮಾಹಿತಿ ನೀಡಿದರು.

ಸೋಮವಾರ (ಡಿಸೆಂಬರ್ 8) ವಿಧಾನಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಸಿ.ಟಿ ರವಿ ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಬಿಪಿಎಲ್ ಪಡಿತರ ಚೀಟಿ-ದಾರರಿಗೆ ವಿತರಿಸುವ ಅನ್ನಭಾಗ್ಯ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಣೆ ಮಾಡಿ ಹೊರ ದೇಶಗಳಿಗೆ, ರಾಜ್ಯಗಳಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?. ಈ ಸಂಬಂಧ ದಾಖಲಾದ ಪ್ರಕರಣದಲ್ಲಿ ಎಷ್ಟು ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ, ಎಷ್ಟು ವಾಹನಗಳನ್ನು ಜಪ್ತಿ ಮಾಡಲಾಗಿದೆ ಮತ್ತು ಎಷ್ಟು ಜನರ ಮೇಲೆ ಮೊಕದ್ದಮ್ಮೆ ದಾಖಲಿಸಲಾಗಿದೆ ಎಂದು ಸಿ.ಟಿ ರವಿ ಕೇಳಿದರು.

ಮುಂದುವರಿದು, ಅನ್ನಭಾಗ್ಯದ ಅಕ್ಕಿಯ ಅಕ್ರಮ ಸಂಗ್ರಹ ಮತ್ತು ಮಾರಾಟದ ಪ್ರಕರಣಗಳ ತನಿಖೆಗೆ ಸರ್ಕಾರ ಆದೇಶ ನೀಡಿದೆಯೇ? ಈ ಪ್ರಕರಣಗಳಲ್ಲಿ ಎಷ್ಟು ಜನರನ್ನು ಬಂಧಿಸಲಾಗಿದೆ? ಹೂಡಿರುವ ಪ್ರಕರಣಗಳು ಯಾವುವು? ಅಕ್ರಮದಲ್ಲಿ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮ ಏನು? ಎಂದು ಪ್ರಶ್ನಿಸಿದರು.

ಇದಕ್ಕೆ ಉತ್ತರಿಸಿದ ಸಚಿವ ಮುನಿಯಪ್ಪ, 2025-26ರಲ್ಲಿ ಅನ್ನಭಾಗ್ಯ ಪಡಿತರ ಅಕ್ಕಿಯ ಅಕ್ರಮ ಸಂಗ್ರಹ ಮತ್ತು ಮಾರಾಟ ಪ್ರಕರಣಗಳಿಗೆ ಸಂಬಂಧಿಸಿದಂತೆ 485 ಮೊಕದ್ದಮೆಗಳನ್ನು ಹೂಡಲಾಗಿದೆ, 461 ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ, 570 ಜನರನ್ನು ಬಂಧಿಸಲಾಗಿದೆ. 29,603 ಕ್ವಿಂಟಾಲ್ ಅಕ್ಕಿ ವಶಪಡಿಸಿಕೊಂಡಿದ್ದೇವೆ ಮತ್ತು 314 ವಾಹನಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದರು. ಯಾದಗಿರಿ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ. ಕೊಪ್ಪಳ ಗೋದಾಮಿನ ಪ್ರಕರಣದಲ್ಲಿ ಸುಮಾರು 330 ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಂಡು ಎಫ್‌ಐಆರ್ ದಾಖಲಿಸಲಾಗಿದೆ.

## ಮಧ್ಯಪ್ರದೇಶ ಸಿಎಂ ಮೋಹನ್ ಯಾದವ್ ಸಮ್ಮುಖದಲ್ಲಿ 10 ನಕ್ಸಲರು ಶರಣಾಗತಿ: ಮುಖ್ಯವಾಹಿನಿಗೆ ಬಂದವರಿಗೆ ಸಂವಿಧಾನ ಪ್ರತಿ ನೀಡಿದ ಸಿಎಂ

■ವಿಜಯಸಾಕ್ಷಿ ಸುದ್ದಿ, ಮಧ್ಯಪ್ರದೇಶ

ಡಿಸೆಂಬರ್ 7 ರಂದು, ನಾಲ್ವರು ಮಹಿಳೆಯರು ಸೇರಿದಂತೆ ಹತ್ತು ಮಂದಿ ನಕ್ಸಲರು ಬಾಲಘಾಟ್ ಜಿಲ್ಲೆಯಲ್ಲಿ ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ. ಮೋಹನ್ ಯಾದವ್ ಅವರ ನೇತೃತ್ವದಲ್ಲಿ ಮುಖ್ಯವಾಹಿನಿಗೆ ಬಂದರು. ಶರಣಾಗತಿಯಾದ ನಕ್ಸಲರ ಬಳಿ ಇದ್ದ, AK-47 ಗಳು, ಎರಡು INSAS ರೈಫಲ್‌ಗಳು, ಎರಡು ಸಿಂಗಲ್-ಶಾಟ್ ರೈಫಲ್‌ಗಳು, ಒಂದು ಸ್ವಯಂ-ಲೋಡಿಂಗ್ ರೈಫಲ್, 7 ಬ್ಯಾರೆಲ್ ಗ್ರೆನೇಡ್ ಲಾಂಚರ್ (ಃಉಐ) ಸೆಲ್‌ಗಳು, 5 ಡಿಟೋನೇಟರ್‌ಗಳು, 4 ವಾಕಿ-ಟಾಕಿ ಸೆಟ್‌ಗಳು ಮತ್ತು 100 ಕ್ಕೂ ಹೆಚ್ಚು ಸುತ್ತುಗಳ ಕಾರ್ಟ್ರಿಡ್ಜ್‌ಗಳನ್ನು ಒಳಗೊಂಡ ಶಸ್ತ್ರಾಸ್ತ್ರಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಹಸ್ತಾಂತರಿಸಿದರು.

ಶಸಸ್ತ್ರ ಹೋರಾಟದಲ್ಲಿ ತಲೆಮರೆಸಿಕೊಂಡಿದ್ದ 10ಜನರನ್ನು ಮುಖ್ಯವಾಹಿನಿಗೆ ಸೇರಿಸುವ ಸಲುವಾಗಿ, ಮುಖ್ಯಮಂತ್ರಿ ಮೋಹನ್ ಯಾದವ್ ಅವರಿಗೆ ಸಂವಿಧಾನದ ಪ್ರತಿಯನ್ನು ನೀಡಿದರು. ಶರಣಾಗಿರುವ ನಕ್ಸಲರನ್ನು ಸೆರೆಹಿಡಿದವರಿಗೆ ವಿವಿಧ ರಾಜ್ಯಗಳಲ್ಲಿ ಒಟ್ಟು 2.36 ಕೋಟಿ ರೂ.ಗಳ ಬಹುಮಾನವನ್ನು ಘೋಷಿಸಿದ್ದವು. ಅವರು ನಿಷೇಧಿತ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ (ಮಾವೋವಾದಿ)ದ "ಭೋರಾಮ್‌ಡಿಯೊ ಪ್ರದೇಶ ಸಮಿತಿ"ಗೆ ಸೇರಿದವರು.

ಈ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಯಾದವ್, "ದಿಂಡೋರಿ ಮತ್ತು ಮಾಂಡ್ಲಾ ಈಗ ನಕ್ಸಲ್ ಪ್ರಭಾವದಿಂದ ಸಂಪೂರ್ಣವಾಗಿ ಮುಕ್ತವಾಗಿವೆ. ಜನವರಿಯಿಂದ ಬಾಲಘಾಟ್‌ನಲ್ಲಿ ಸಂಪೂರ್ಣ ನಕ್ಸಲ್ ನಿರ್ಮೂಲನಾ ಅಭಿಯಾನ ಪ್ರಾರಂಭವಾಗಲಿದೆ.

# ಬೆಳಗಾವಿ ಸುವರ್ಣಸೌಧವರೆಗೆ ಮೌನ ಪಥಸಂಚಲನ ನಾಳೆ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಜಿಯವರ ದಿವ್ಯ ಸಾನ್ನಿಧ್ಯದಲ್ಲಿ ನಗರದ ಅಶೋಕ ಸಂಕಣ್ಣವರ ಮಿಲ್‌ನಲ್ಲಿ ಜರುಗಿದ ಸಭೆಯಲ್ಲಿ ಡಿಸೆಂಬರ್ 10ರಂದು ಬೆಳಗಾವಿಯ ಗಾಂಧಿ ಭವನದಿಂದ ಸುವರ್ಣಸೌಧವರೆಗೆ ಮೌನ ಪಥಸಂಚಲನ ನೆಡೆಸಲು ನಿರ್ಣಯ ಕೈಗೊಳ್ಳಲಾಯಿತು. ಗದಗ ಜಿಲ್ಲೆಯ ಪಂಚಮಸಾಲಿ ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಶ್ರೀಗಳು ಮನವಿ ಮಾಡಿದರು

ಈ ಸಂದರ್ಭದಲ್ಲಿ ಹಿರಿಯರ ಘಟಕದ ಅಧ್ಯಕ್ಷ ಅನಿಲಕುಮಾರ ಪಾಟೀಲ್, ಅಶೋಕ ಸಂಕಣ್ಣವರ, ಮೋಹನ ಮಾಳಶೆಟ್ಟಿ, ಎಸ್.ಎಸ್. ಹುರಕಡ್ಲಿ, ವಿರೂಪಾಕ್ಷಪ್ಪ ಮಟ್ಟಿ, ಕುಬೇರಗೌಡ ಮಲ್ಲಪೂರ, ಡಾ. ಎಸ್.ವಿ. ಶಿವನಗೌಡ್ರ, ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ವಸಂತ ಪಡಗದ, ಈರಣ್ಣ ಕೊಟಗಿ, ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ಪ್ರಕಾಶ್ ಅಂಗಡಿ, ಶಿವರಾಗೌಡ ಹಿರೇಮನಿಪಾಟೀಲ, ಸಂಗಮೇಶ ಕವಳಿಕಾಯಿ, ಮಹಿಳಾ ಘಟಕದ ಅಧ್ಯಕ್ಷರು ಲಲಿತಾ ಗೊಳಗೊಳಕಿ, ಸಿದ್ದಣ್ಣ ಜೀವನಗೌಡ್ರ, ಸಿದ್ದು ಪಾಟೀಲ್, ಉಮೇಶ್ ಚಿನ್ನು ಪಾಟೀಲ, ಶರಣಪ್ಪ ಗೊಳಗೊಳಕಿ, ಬಸವರಾಜ ಕಲ್ಲೂರ, ಉಮೇಶ ಮುಳ್ಳಾಳ, ಪ್ರಕಾಶ ಹಡಗಲಿ, ಪ್ರಭು ಬಳ್ಳಾರಿ, ಚಂದ್ರು ಪಾಟೀಲ್, ಸಂಗಮೇಶ ಗೊಂದಿ, ಸಂಗಮೇಶ ಅಂಗಡಿ, ಆನಂದ ಅಂಗಡಿ, ರವಿ ನೇರಗಲ್ಲ, ರಾಜು ರೊಟ್ಟಿ, ಈರಮ್ಮ ತಾಳಿಕೋಟಿ ಮುಂತಾದವರು ಉಪಸ್ಥಿತರಿದ್ದರು.

### 'ಸಿದ್ಧಶ್ರೀ ರಾಷ್ಟ್ರೀಯ ಚಲನಚಿತ್ರೋತ್ಸವ'ದ ಪೂರ್ವಭಾವಿ ಸಭೆ

# 'ಸಿದ್ಧಶ್ರೀ' ರಾಷ್ಟ್ರೀಯ ಉತ್ಸವ ಜ.14ರಿಂದ

■ವಿಜಯಸಾಕ್ಷಿ ಸುದ್ದಿ, ಬಾಗಲಕೋಟ

ಇಲಕಲ್ಲ ತಾಲೂಕಿನ ಐತಿಹಾಸಿಕ ಸ್ಥಳ ಐಹೊಳೆ ಹತ್ತಿರದ ಉತ್ತರಕರ್ನಾಟಕದ ಕಲಾಪೋಷಕರ ಮಠ ಸಿದ್ಧನಕೊಳ್ಳದ ಸುಕ್ಷೇತ್ರ ಸಿದ್ಧನಕೊಳ್ಳದ 'ಸಿದ್ಧಶ್ರೀ' ರಾಷ್ಟ್ರೀಯ ಉತ್ಸವ ಹಾಗೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-2026 ಜ.14, 15 ಮತ್ತು 16ರಂದು ಜರುಗಲಿದ್ದು, ಜ. 14ರಂದು ರಾಷ್ಟ್ರೀಯ ಪ್ರಶಸ್ತಿ ಪುರಸ್ಕಾರ, ಜ. 15ರಂದು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ, ಜ.16ರಂದು ಜಾತ್ರಾಮಹೋತ್ಸವ ಸಮಾರೋಪ ಜರುಗಲಿದೆ ಎಂದು ಧರ್ಮಾಧಿಕಾರಿಗಳಾದ ಡಾ. ಶಿವಕುಮಾರ ಸ್ವಾಮೀಜಿ ತಿಳಿಸಿದರು.

ಸಿದ್ಧನಕೊಳ್ಳದ ಶ್ರೀಮಠದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಶ್ರೀಗಳು, ಸಿದ್ಧಶ್ರೀ ಉತ್ಸವದಲ್ಲಿ ಸಹಸ್ರಾರು ಭಕ್ತರು ಸೇರುತ್ತಿದ್ದು, ಸಂಗೀತ, ನೃತ್ಯ, ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮಗಳು ನೆರವೇರುತ್ತವೆ. ರಾಜ್ಯ, ಹೊರರಾಜ್ಯಗಳ ವಿವಿಧ ಸಾಧಕರು, ಪ್ರತಿಭಾನ್ವಿತ, ಉದಯೋನ್ಮುಖ ಕಲಾಪ್ರತಿಭೆಗಳಿಗೂ ವೇದಿಕೆ ನೀಡಿ ಪ್ರೋತ್ಸಾಹಿಸಲಾಗುತ್ತದೆ. ಪ್ರತಿವರ್ಷದಂತೆ ಈ ವರ್ಷವೂ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಹಮ್ಮಿಕೊಳ್ಳಲಾಗುತ್ತಿದ್ದು, ಈಗಾಗಲೇ ಚಿತ್ರೋತ್ಸವ ಆಯ್ಕೆ ಸಮಿತಿ ರಚಿಸಲಾಗಿದೆ.



ಶ್ರೀಗಳ ಮತ್ತು ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ. ತಮ್ಮ ಟೀಸರ್, ಟ್ರೈಲರ್, ಪೋಸ್ಟರ್‌ಗಳನ್ನು ಡಾ. ಪ್ರಭು ಗಂಜಿಹಾಳ-ವಾಟ್ಸಪ್ ನಂ-9448775346 ಇಲ್ಲಿಗೆ ಕಳುಹಿಸಬೇಕು. ಹೆಚ್ಚಿನ ಮಾಹಿತಿಗಾಗಿ ಚಲನಚಿತ್ರೋತ್ಸವ ವಿಭಾಗದ ಡಾ. ವೀರೇಶ ಹಂಡಿಗಿ-ಮೊ: 9060933596, ವೀರೇಶ ಪುರವಂತ-ಮೊ: 7026062364, ಸಂಗನಗೌಡ್ರು ಕುರುಡಗಿ-ಮೊ: 8861811128 ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಶ್ರೀಗಳು ತಿಳಿಸಿದರು.

ಸಿನಿಮಾ ಪತ್ರಕರ್ತರಾದ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ಜ್ಯೂ. ಉಪೇಂದ್ರ ವೀರೇಶ ಪುರವಂತ, ಚಲನಚಿತ್ರ ಕಲಾವಿದರಾದ ಸಂಗನಗೌಡ್ರುಕುರುಡಗಿ, ಚಲನಚಿತ್ರ ನಿರ್ದೇಶಕ ಅರವಿಂದ ಮುಳಗುಂದ, ನಿರ್ಮಾಪಕ ಲೋಕೇಶ ವಿದ್ಯಾಧರ, ಚಲನಚಿತ್ರ ಕಲಾವಿದೆ ಸುನಂದಾ ಕಲ್ಬುರ್ಗಿ, ಭರತನಾಟ್ಯ ಕಲಾವಿದೆ ಕೃತ್ತಿಕಾ ಕಾರ್ಯ ನಿರ್ವಹಿಸಲಿದ್ದಾರೆ. ನಿರ್ಮಾಪಕರು, ನಿರ್ದೇಶಕರು, ಕಲಾವಿದರು, ಇನ್ನೂ ಬಿಡುಗಡೆ-ಯಾಗದ ತಮ್ಮ 2025ರಲ್ಲಿ ನಿರ್ಮಾಣವಾದ, ಆಗುತ್ತಿರುವ ಹೊಸ ಚಲನಚಿತ್ರಗಳ, ಟೆಲಿಫಿಲ್ಮ್, ಕಿರುಚಿತ್ರಗಳ, ಟ್ರೈಲರ್, ಟೀಸರ್ ಮತ್ತು ಪೋಸ್ಟರ್‌ಗಳನ್ನು ಬಿಡುಗಡೆ ಮಾಡಬಹುದು.

ಯಾವುದೇ ಪ್ರವೇಶ ಶುಲ್ಕವಿಲ್ಲದೆ ಉಚಿತ ಅವಕಾಶ ಕಲ್ಪಿಸಲಾಗಿದೆ. ಭಾಗವಹಿಸಿದ ಚಲನಚಿತ್ರ ತಂಡಗಳಿಗೆ ಅಭಿನಂದನಾ ಪತ್ರ, ನೆನಪಿನ ಸ್ಮರಣಿಕೆ, ಕಿರುಚಿತ್ರ ತಂಡಗಳಿಗೆ ಅಭಿನಂದನಾ ಪತ್ರಗಳನ್ನು ನೀಡಲಾಗುತ್ತದೆ. ಆಸಕ್ತರು ಡಿಸೆಂಬರ್ 31ರೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ನಂತರ ಬಂದವರಿಗೆ ಅವಕಾಶ ಇರುವುದಿಲ್ಲ ಎಂದು ಶ್ರೀಗಳು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಯಲ್ಲಿ ಡಾ. ಪ್ರಭು ಗಂಜಿಹಾಳ, ಸಂಗನಗೌಡ ಕುರುಡಗಿ, ವೀರೇಶ ಪುರವಂತರ, ವೀರಭದ್ರೇಶ್ವರಸ್ವಾಮಿ ಲಿಂಗಸೂರು, ಕರವೇ ಅಧ್ಯಕ್ಷ ಅಶೋಕ ಪೂಜಾರ, ವೀಣಾ ಹಿರೇಮಠ, ಚಲನಚಿತ್ರ ನಿರ್ದೇಶಕರಾದ ಲೋಕೇಶ ವಿದ್ಯಾಧರ, ಶಿವರಾಜು, ಸ್ಮೈಲ್ ಶಶಿ, ಸಂಗಮೇಶ ಹುದ್ದಾರ, ಮೈಲಾರಗೌಡ ಗೌಡಪ್ಪಗೌಡರ ಮೊದಲಾದವರು ಉಪಸ್ಥಿತರಿದ್ದರು.

### ಪ್ರೊ. ಎಸ್.ವಿ. ಸಂಕನೂರರಿಂದ ಪ್ರವಾಸ ಅನುಭವ ಅನಾವರಣ

# ದೇಶದ ಉನ್ನತಿಗೆ ಪೌರಪ್ರಜ್ಞೆ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ದೇಶ ಎಂದರೆ ಅಲ್ಲಿಯ ಜನಗಳು. ಸ್ವಚ್ಛತೆ, ಸೌಂದರ್ಯ ಪ್ರಜ್ಞೆ, ಶಿಸ್ತು, ಕಾನೂನು ಪಾಲನೆಯಂತ ವಿಷಯಗಳಲ್ಲಿ ಜಾಗೃತರಾಗಿ ಸ್ವಯಂಪ್ರೇರಿಣೆಯಿಂದ ಕಾರ್ಯೋನ್ಮುಖರಾದಾಗ ದೇಶದ ಏಳ್ಗೆ ಸಾಧ್ಯ ಎಂಬುದು ಅಮೇರಿಕಾ ಪ್ರವಾಸದಲ್ಲಿ ನನಗೆ ಕಂಡು ಬಂದ ಅನುಭವವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ತೋಂಟದ ಸಿದ್ಧಲಿಂಗಶ್ರೀ ಕನ್ನಡ ಭವನದಲ್ಲಿ ಜರುಗಿದ ಸಾಹಿತ್ಯ ಸಿಂಚನ ಮಾಲಿಕೆಯಲ್ಲಿ 'ವಿದೇಶ ಪ್ರವಾಸ ಒಳನೋಟಗಳು' ವಿಷಯವಾಗಿ ಮಾತನಾಡಿದರು.

ಪ್ರಾಥಮಿಕ ಹಾಗೂ ಪ್ರೌಢ ಹಂತದ ಶಿಕ್ಷಣ ಸಂಪೂರ್ಣ ಉಚಿತವಾಗಿದ್ದು, ಗುಣಮಟ್ಟದ ಶಿಕ್ಷಣವನ್ನು ಎಲ್ಲ ಮಕ್ಕಳಿಗೆ ನೀಡಲಾಗುತ್ತಿದೆ. ಸ್ವಯಂಸೇವಾ ಮನೋಭಾವನೆಯನ್ನು ಅಲ್ಲಿಯ ಎಲ್ಲ ನಾಗರಿಕರು ಹೊಂದಿದ್ದು, ಸರ್ವ ರೀತಿಯಿಂದಲೂ ಸ್ವಾವಲಂಬಿಗಳಾಗಿದ್ದಾರೆ. ಸಾರಿಗೆ, ಶಿಕ್ಷಣ, ಆರೋಗ್ಯ ಕ್ಷೇತ್ರಗಳ ವಿಷಯಗಳಲ್ಲಿ ಸ್ವಲ್ಪ ಮಟ್ಟಿನ ಅಧ್ಯಯನವನ್ನು ಮಾಡಲು ಸಹಾಯಕವಾಯಿತು. ನಮ್ಮಲ್ಲೂ ಕೂಡಾ ಮೂಲಶಿಕ್ಷಣದ ಹಂತದಲ್ಲಿಯೇ ಈ ಎಲ್ಲ ಅಂಶಗಳನ್ನು ಕಲಿಸಿಕೊಡುವ ವ್ಯವಸ್ಥೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ರಾಜು ಹೆಬ್ಬಳ್ಳಿ ಮಾತನಾಡಿ, ದೇಶ ಸರ್ವಾಂಗ ಸುಂದರವಾಗಿ ಬೆಳವಣಿಗೆ ಹೊಂದುವ ಹಿನ್ನೆಲೆಯಲ್ಲಿ ಪತ್ರಕರ್ತರು ಮತ್ತು ಪತ್ರಿಕೆಗಳ ಕಾರ್ಯ ಮಹತ್ವದ್ದಾಗಿದೆ. ಜನ ಮತ್ತು ಸರಕಾರ ಮಧ್ಯೆ ಕೊಂಡಿಯಾಗಿ ಪತ್ರಕರ್ತರು ಕಾರ್ಯನಿರ್ವಹಿಸುತ್ತಿದ್ದಾರೆ. ಕಳೆದ ನಾಲ್ಕು ವರ್ಷಗಳಿಂದ ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾಹಿತ್ಯ, ಸಂಸ್ಕೃತಿಯ ವಿಚಾರಗಳನ್ನು ಪಸರಿಸುವ ಕಾರ್ಯವನ್ನು ಮಾಡಿ ನಾಡಿನ ಗಮನ ಸೆಳೆದಿದೆ ಎಂದು ತಿಳಿಸಿದರು. ಡಿ.ಡಿ.ಪಿ.ಐ ಕಚೇರಿಯ ತಾಂತ್ರಿಕ ಸಹಾಯಕರಾದ ಎಂ.ಎಚ್. ಸವದತ್ತಿ ವೇದಿಕೆಯಲ್ಲಿದ್ದರು.




ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಆಯ್ಕೆಯಾದ ಅನಿಲ ತೆಂಬದಮನಿ, ವಿ.ಡಿ. ಕಣವಿ, ಶರಣು ದೊಡ್ಡೂರ, ಸಂಗಪ್ಪ ವ್ಯಾಪಾರಿ, ಬನೇಶ ಕುಲಕರ್ಣಿ, ರಾಮಣ್ಣ ವಗ್ಗಿ, ಅರುಣಕುಮಾರ ಹಿರೇಮಠ ಅವರನ್ನು ಸನ್ಮಾನಿಸಲಾಯಿತು. ಡಾ. ರಾಜಶೇಖರ ಬಳ್ಳಾರಿ ಅವರು ತಮ್ಮ ಅಜ್ಜನವರ ಸ್ಮರಣಾರ್ಥವಾಗಿ ಪರಿಷತ್ತಿನಲ್ಲಿ ದತ್ತಿನಿಧಿಯನ್ನು ಸ್ಥಾಪಿಸಿದರು.

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ ಅವರ ಪರಿನಿರ್ವಾಣದಿನದ ಅಂಗವಾಗಿ ಮಂಜುಳಾ ವೆಂಕಟೇಶಯ್ಯ ಅವರಿಂದ ಕವನ ವಾಚನ ಜರುಗಿ-ತು. ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಸತೀಶ ಚನ್ನಪ್ಪಗೌಡ್ರ ವಂದಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಪ್ರವಾಸ ಕಥನಗಳು ಗಮನ ಸೆಳೆದಿವೆ. ವಿದೇಶದ ವಿಭಿನ್ನ ವಿಚಾರಗಳನ್ನು ಬರೆಹದ ಮೂಲಕ ಓದುಗನಲ್ಲಿ ವಿಶಿಷ್ಠ ಅನುಭೂತಿಯನ್ನು ಉಂಟುಮಾಡುವಲ್ಲಿ ಪ್ರವಾಸ ಸಾಹಿತ್ಯ ಯಶಸ್ವಿಯಾಗಿವೆ. ಆಚಾರ, ವಿಚಾರ, ಆಹಾರ, ವಿಹಾರ, ಸಂಸ್ಕೃತಿ, ಪರಂಪರೆಯನ್ನು ಅರಿಯಲು ಸಹಾಯ ಮಾಡುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ ಕೆ.ಎಚ್. ಬೇಲೂರ, ರತ್ನಕ್ಕ ಪಾಟೀಲ, ಡಾ. ಜಿ.ಬಿ. ಪಾಟೀಲ, ಡಾ. ಧನೇಶ ದೇಸಾಯಿ, ಎಸ್.ಯು. ಸಜ್ಜನಶೆಟ್ಟರ, ಬಿ.ಜಿ. ಗಿರಿತಮ್ಮಣ್ಣವರ, ಜಿ.ಎ. ಪಾಟೀಲ, ಬಸವರಾಜ ತೆ-ೂೀಟಗೇರಿ, ವಿ.ಎಸ್. ದಲಾಲಿ, ಬಿ.ಬಿ. ಹೊಳಗುಂದಿ, ರಾಜಶೇಖರ ಕರಡಿ, ಅಶೋಕ ಸತ್ಯರಡ್ಡಿ, ಶಕುಂತಲಾ ಗಿಡ್ನಂದಿ, ಜಯನಗೌಡ ಪಾಟೀಲ, ಅಮರೇಶ ರಾಂಪೂರ, ರತ್ನಾ ಪುರಂತರ, ಶಶಿಕಾಂತ ಕೊರ್ಲಹಳ್ಳಿ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಎಸ್.ಆರ್. ಚನ್ನಪಗೌಡರ, ರವಿ ದೇವರಡ್ಡಿ, ಉಮಾ ಕಣವಿ, ಡಾ. ಗಂಗೂಬಾಯಿ ಪವಾರ, ಕೆ.ಎಸ್. ಜಯದೇವಭಟ್, ಬಸವರಾಜ ನೆಲಜೇರಿ, ಎ.ಎಂ. ಅಂಗಡಿ, ರಾಹುಲ ಗಿಡ್ನಂದಿ, ಅಂದಾನೆಪ್ಪ ವಿಭೂತಿ, ಡಾ. ಬಿ.ಎಲ್. ಚವ್ಹಾಣ, ಎಸ್.ಎ. ಸೋಮಗೊಂಡ, ಕೆ.ಎಸ್. ಜಯದೇವಭಟ್ಟ, ವಿ.ಕೆ. ದ್ಯಾಮನಗೌಡ್ರ, ರಮೇಶ ಹುಲಕುಂದ, ಎಂ.ಎಸ್. ಕುಲಕರ್ಣಿ, ಪಿ.ವಿ. ಇನಾಮದಾರ, ಡಿ.ಜಿ. ಕುಲಕರ್ಣಿ, ಗಂಗಮ್ಮ ಮುದಗಲ್, ವಿ.ಡಿ. ಸಿದ್ಧನಗೌಡ್ರ, ಸುರೇಶ ಅಂಗಡಿ, ಎಸ್.ಎಂ. ಉಳ್ಳಾಗಡ್ಡಿ, ಸತೀಶ ಕುಲಕರ್ಣಿ, ಷಡಕ್ಷರಿ ಮೆಣಸಿನಕಾಯಿ, ಕಿರಣ ಗುಗ್ಗರಿ ಮೊದಲಾದವರು ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

▶▶ಮೊದಲನೇ ಪುಟದಿಂದ

ಪರಿಶೀಲನೆ ಮತ್ತು ಆಯ್ಕೆಗೆ ಸಂಬಂಧಿಸಿದಂತೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ. ಪ್ರಶಸ್ತಿ ಪ್ರದಾನವನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಅಥವಾ ಸರ್ಕಾರವು ನಿಗದಿಪಡಿಸುವ ದಿನಾಂಕ ಹಾಗೂ ಸ್ಥಳಗಳಲ್ಲಿ ಏರ್ಪಡಿಸಲಾಗುವುದು, ಪ್ರಶಸ್ತಿಗೆ ಆಯ್ಕೆಯಾದ ವ್ಯಕ್ತಿಗಳು ಪ್ರಶಸ್ತಿಗಳನ್ನು ಖುದ್ದಾಗಿ ಪಡೆಯಬೇಕು ಹಾಗೂ ಸಂಘ ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಯನ್ನು ಸಂಘದ ಪದಾಧಿಕಾರಿಗಳು ಸ್ವೀಕರಿಸಬಹುದಾಗಿದೆ.

**ವೀರ ಮಹಿಳೆ ಪ್ರಶಸ್ತಿಗೆ ಷರತ್ತುಗಳು:** 18 ರಿಂದ 45 ವಯೋಮಿತಿಯೊಳಗಿನ ಒಬ್ಬ ಮಹಿಳೆಯು ಆಪತ್ಕಾಲದಲ್ಲಿರುವ ಮತ್ತೊಬ್ಬ ವ್ಯಕ್ತಿಯ ಜೀವ ಕಾಪಾಡುವಲ್ಲಿ ಅಥವಾ ಪ್ರಾಣ ರಕ್ಷಿಸುವಲ್ಲಿ ತನ್ನ ಜೀವದ ಹಂಗನ್ನು ತೊರೆದು ಸಮಯ ಪ್ರಜ್ಞೆಯಿಂದ ಧೈರ್ಯ, ಸಾಹಸದೊಂದಿಗೆ ಅಪಾಯದಲ್ಲಿರುವ ವ್ಯಕ್ತಿಯ ಜೀವ ಕಾಪಾಡುವಂತಹ ಕಾರ್ಯವನ್ನು ಮಾಡಿದಲ್ಲಿ ಅಂತಹ ಮಹಿಳೆಯರನ್ನು ವೀರ ಮಹಿಳೆ ಎಂದು ಪರಿಗಣಿಸಲಾಗುವುದು. ವೀರ ಮಹಿಳೆ ಪ್ರಶಸ್ತಿ ಪಡೆಯುವ ಮಹಿಳೆಯು ಶೌರ್ಯ ಹಾಗೂ ಸಾಧನೆಯನ್ನು ಮಾಡಿರಬೇಕು. ಈ ಸಾಧನೆಯು ಸಾರ್ವಜನಿಕ ಗಮನಕ್ಕೆ ಬಂದಿರಬೇಕು. ಹಾಗೂ ಈ ಸಾಧನೆಯು ಪ್ರಶಸ್ತಿ ಪಡೆಯುವ ಹಿಂದಿನ ವರ್ಷದ ಜನವರಿ 1-2025 ರಿಂದ ಡಿಸೆಂಬರ್ 31ರ 2025 ಒಳಗೆ ಇರಬೇಕು, ಪ್ರಶಸ್ತಿ ಸಂಬಂಧಿಸಿದ ಮಹಿಳೆಯ ತಂದೆ/ತಾಯಿ/ಪೋಷಕರು ಅರ್ಜಿಯನ್ನು ಸಲ್ಲಿಸಬಹುದು. ವೀರ ಮಹಿಳೆ ಪ್ರಶಸ್ತಿಗಾಗಿ ರಾಜ್ಯ ಸರ್ಕಾರದ ವತಿಯಿಂದ ಒಬ್ಬ ಮಹಿಳೆಗೆ ಮಾತ್ರ ರೂ. 25000.00ಗಳ ನಗದು ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಅರ್ಹ ಸಂಸ್ಥೆಗಳು ಹಾಗೂ ಅರ್ಹ ವ್ಯಕ್ತಿಗಳು, ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂಖ್ಯೆ:006, ಜಿಲ್ಲಾ ಆಡಳಿತ ಭವನ, ಹುಬ್ಬಳ್ಳಿ ರೋಡ್,ಗದಗ ಮತ್ತು ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಇವರಿಂದ ನಿಗದಿತ ನಮೂನೆಗಳನ್ನು ಹಾಗೂ ಷರತ್ತುಗಳ ಪ್ರತಿಗಳನ್ನು ಪಡೆದು ಡಿ. 24 ರೊಳಗೆ ರಜೆ ದಿನಗಳನ್ನು ಹೊರತು ಪಡಿಸಿ ಅರ್ಜಿ ಸಲ್ಲಿಸಲು ಕೋರಲಾಗಿದೆ. ಅವಧಿ ಮೀರಿ ಬಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ನಮೂನೆಗಳನ್ನು ಜಿಲ್ಲಾ/ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಕಾರಿಗಳ ಕಚೇರಿಯಲ್ಲಿ ಪಡೆಯಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗಜೇಂದ್ರಗಡ ದಕ್ಷಿಣ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ ಉದ್ಘಾಟನೆ

# ಪ್ರತಿಭಾ ಕಾರಂಜಿ ಸರ್ವಾಂಗೀಣ ಬೆಳವಣಿಗೆಯ ಬುನಾದಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮಕ್ಕಳಲ್ಲಿ ಅಡಗಿರುವ ಸೂಕ್ತ ಪ್ರತಿಭೆಗಳನ್ನು ಹೊರಹಾಕಲು ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮಗಳು ಸಹಕಾರಿಯಾಗಿವೆ ಎಂದು ಶಿಕ್ಷಣ ಇಲಾಖೆಯ ಸಮನ್ವಯ ಅಧಿಕಾರಿ ಎಮ್.ಎ. ಫಣಿಭಂದ ಹೇಳಿದರು.



ದಕ್ಷಿಣ ಕ್ಲಸ್ಟರ್ ವ್ಯಾಪ್ತಿಯ ಶಾಲೆಗಳ ವಿದ್ಯಾರ್ಥಿಗಳ ಪ್ರತಿಭೆಗೆ ವೇದಿಕೆಯಾಗಿರುವ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಲೆ, ಸಾಹಿತ್ಯ, ಕ್ರೀಡೆ ಮತ್ತು ಜ್ಞಾನ ವಿದ್ಯಾರ್ಥಿಗಳ ಸರ್ವಾಂಗೀಣ ಬೆಳವಣಿಗೆಯ ಬುನಾದಿಯಾಗಿವೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಆತ್ಮವಿಶ್ವಾಸ, ನಾಯಕತ್ವ ಮತ್ತು ಭಾಷಾ ಲಾಲಿತ್ಯವನ್ನು ಬೆಳೆಸುತ್ತವೆ ಎಂದು ಹೇಳಿದರು.

ಪ್ರಾಸ್ತಾವಿಕವಾಗಿ ದಕ್ಷಿಣ ವಲಯದ ಸಿ.ಆರ್.ಪಿ ಆರ್.ಜಿ. ಮ್ಯಾಕಲ್ ಮಾತನಾಡಿ, ಮಕ್ಕಳಲ್ಲಿ ಅಡಗಿದ ಸುಪ್ತ ಪ್ರತಿಭೆಗಳನ್ನು ಹೊರತರಲು ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವಗಳು ಸಹಕಾರಿಯಾಗಿವೆ ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ರಮೇಶ ಮರಾಠಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿದ್ಯಾರ್ಥಿಗಳು ಭಾವಗೀತೆ, ಜನಪದ ನೃತ್ಯ, ನಾಟಕ, ಚುಟುಕು ಕಥನ, ಪದ್ಯ ಪಠಣ, ಕಂಠಪಾಠ ಮುಂತಾದ ಹಲವು ಸ್ಪರ್ಧೆಗಳಲ್ಲಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಮಕ್ಕಳ ಕಲಾ ವೈವಿಧ್ಯತೆ ಮತ್ತು ಸೃಜನಶೀಲತೆ ಪ್ರೇಕ್ಷಕರ ಮನಸೂರೆಗೊಂಡಿತು. ಕಲೋತ್ಸವದ ವಿವಿಧ ವಿಭಾಗಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎಸ್.ಕೆ. ಸರಗಣಾಚಾರಿ, ಕಾರ್ಯದರ್ಶಿ ಬಸವರಾಜ ಅಣ್ಣಿಗೇರಿ, ನೌಕರಿ ಸಂಘದ ಸದಸ್ಯ ಎಸ್.ಎಸ್. ಪಸಾರದ ಅವರನ್ನು ಸನ್ಮಾನಿಸಲಾಯಿತು.

ಉತ್ತರ ವಲಯದ ಸಿ.ಆರ್.ಪಿ ಕಾಲೇಶ ವನ್ನಾಲ, ರಾಜೂರು ಕ್ಲಸ್ಟರ್ ಸಿ.ಆರ್.ಪಿ ಎಮ್.ಯು. ಗೋಡೆಕಾರಣ, ಎಸ್.ಆರ್. ಅಂಗಡಿ, ಎಸ್.ಟಿ. ಪೂಜಾರ, ಎಚ್.ವಿ. ಕಂಬಳಿ, ಸುಮಿತ್ರಾ ಟಿ, ಎನ್.ಎ. ಅಮಟೆ, ಜಿ.ಡಿ. ಕಳ್ಳಿಮನಿ, ಬಸವರಾಜ ಮನವಟ್ಟಗಿ, ರವೀಂದ್ರ ಕವಡಿಮಟ್ಟಿ, ಎಚ್. ಆರ್. ನಿಡಗುಂದಿ, ಕೆ.ಐ. ವಸ್ತಾದ, ವಿನಾಯಕ ಕರ್ಣೆ, ಸುಜಾತಾ ದಿವಾಣದ, ಪ್ರಿಯಾಂಕ ನಾಯಕ, ಎಸ್.ಆರ್. ನೀಲೂರ, ಕಿರಣ ನಿಡಗುಂದಿ ಮುಂತಾದವರಿದ್ದರು.

# ಸಾಲುಮರದ ತಿಮ್ಮಕ್ಕನವರ ಕೋರಿಕೆ ಈಡೇರಿಸಲು ಸರ್ಕಾರ ಪ್ರಯತ್ನಿಸಲಿದೆ

▶▶ಮೊದಲನೇ ಪುಟದಿಂದ

ಶಾಸಕ ಶಿವಶರಣಪ್ಪಗೌಡ ಪಾಟೀಲ ಹಾಗೂ ಖ್ಯಾತ ಹಾಸ್ಯನಟ ಎಂ.ಎಸ್. ಉಮೇಶ್ ನಿಧನಕ್ಕೆ ಸಂತಾಪ ಸೂಚಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಅಗಲಿದ ಗಣ್ಯರ ಕುಟುಂಬ ವರ್ಗದವರಿಗೆ ದುಃಖ ಭರಿಸುವ ಶಕ್ತಿಯನ್ನು ದೇವರು ನೀಡಲಿ, ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಪ್ರಾರ್ಥಿಸಿದರು.



ಸಂತಾಪ ಸೂಚನೆ ನಿರ್ಣಯ ಬೆಂಬಲಿಸಿ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಗೃಹ ಸಚಿವ ಪರಮೇಶ್ವರ್, ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ಹಾಗೂ ಶಾಸಕ ಸಿ.ಎಮ್. ನರೇಂದ್ರಸ್ವಾಮಿ, ಮಾಜಿ ಸಚಿವೆ ಶಶಿಕಲಾ ಜೊಲ್ಲೆ, ಶಾಸಕರುಗಳಾದ ಸಿದ್ದು ಸವದಿ, ಎಂ.ಟಿ. ಕೃಷ್ಣಪ್ಪ, ಅಪ್ಪಾಜಿ ನಾಡಗೌಡ, ಹೆಚ್.ಸಿ. ಬಾಲಕೃಷ್ಣ, ಸುರೇಶ್, ಶ್ರೀನಿವಾಸಯ್ಯ ಎನ್, ಸಿ.ಕೆ. ರಾಮಮೂರ್ತಿ, ಮಹೇಶ್ ಟೆಂಗಿನಕಾಯಿ, ಡಾ. ರೂಪಕಲಾ ಸೇರಿದಂತೆ ಹಲವು ಶಾಸಕರು ಮಾತನಾಡಿದರು. ಮೃತ ಗಣ್ಯರ ಗೌರವಾರ್ಥ ವಿಧಾನಸಭೆಯಲ್ಲಿ ಒಂದು ನಿಮಿಷ ಮೌನ ಆಚರಿಸಿ, ಗೌರವ ಸಲ್ಲಿಸಲಾಯಿತು.

ವಿಧಾನಸಭೆ ಕಲಾಪವನ್ನು ಮಂಗಳವಾರ ಬೆಳಿಗ್ಗೆ 10 ಗಂಟೆಗೆ ಮುಂದೂಡಲಾಗಿದೆ ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಘೋಷಿಸಿದರು.

# ಯಾವುದೇ ಜನಾಂಗದ ಹೋರಾಟವನ್ನು ಹತ್ತಿಕ್ಕಬೇಡಿ

▶▶ಮೊದಲನೇ ಪುಟದಿಂದ

ಹಾಗೂ ಸಮಸ್ತ ಭಾರತೀಯರ ಆಗ್ರಹವಾಗಿದೆ. ಸರಕಾರ ಇದರ ಬಗ್ಗೆ ಗಂಭೀರವಾಗಿ ಆಲೋಚಿಸಬೇಕು. ಅದನ್ನು ಬಿಟ್ಟು ಕಾಯಿದೆಗೆ ತಿದ್ದುಪಡಿ ತರಲು ಮುಂದಾದರೆ ಅದು ದಯಾಮೂಲ ಸಂಸ್ಕೃತಿಗೆ ಸರ್ಕಾರ ಮಾಡುತ್ತಿರುವ ವಿರೋಧವಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಳೆದ ವರ್ಷ ಬೆಳಗಾವಿಯ ಸುವರ್ಣ ವಿಧಾನಸೌಧದ ಬಳಿ ನಡೆದ ಪಂಚಮಸಾಲಿ ಮೀಸಲಾತಿ ಹೋರಾಟದ ವೇಳೆ ರಾಜ್ಯ ಸರ್ಕಾರವೇ ಪೊಲೀಸರಿಗೆ ಕುಮ್ಮಕ್ಕು ನೀಡಿ ನಮ್ಮ ಸಮುದಾಯದ ಜನರ ಮೇಲೆ ಅಮಾನವೀಯವಾಗಿ, ಕಾನೂನುಬಾಹಿರವಾಗಿ ಮಾರಣಾಂತಿಕ ಹಲ್ಲೆ ನಡೆಸಿತ್ತು. ಸರ್ಕಾರವೊಂದು ಸಮುದಾಯದ ಮೇಲೆ ದೌರ್ಜನ್ಯ ಎಸಗಿದ್ದು ಇದೇ ಮೊದಲು. ಇದು ನಮ್ಮ ಸಮುದಾಯದ ಸ್ವಾಭಿಮಾನಕ್ಕೆ ಬಿದ್ದ ಪೆಟ್ಟು ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ಡಿ. 10ರಂದು ಲಿಂಗಾಯತ ದೌರ್ಜನ್ಯ ದಿನವನ್ನಾಗಿ ಆಚರಿಸಲಾಗುವುದು. ಅಂದು ಬೆಳಗಾವಿಯ ಗಾಂಧಿ ಭವನದಿಂದ ಸುವರ್ಣ ವಿಧಾನಸೌಧದವರೆಗೆ ಕೈ ಹಾಗೂ ಬಾಯಿಗೆ ಕಪ್ಪು ಬಟ್ಟೆ ಕಟ್ಟಿಕೊಂಡು, ಪಂಚಮಸಾಲಿ ಧ್ವಜ ಹಿಡಿದು ಮೌನ ಪಥ ಸಂಚಲನ ನಡೆಸಲಾಗುವುದು.

ಯಾವುದೇ ಜನಾಂಗದ ಹೋರಾಟವನ್ನು ಹತ್ತಿಕ್ಕುವ ಕೆಲಸ ಮಾಡದಿರುವಂತೆ ಈ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡುತ್ತೇವೆ ಎಂದರು.

# ಶಾಲೆಗಳ ವಿಲೀನದ ಅಂಶವನ್ನು ಹಿಂಪಡೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸೋಮವಾರ ಬೆಳಗಾವಿ ಅಧಿವೇಶನದಲ್ಲಿ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು, ಸರ್ಕಾರಿ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಹೇಳಿದ್ದಾರೆ. ಜೊತೆಗೆ, ಈ ರೀತಿಯ ಅಪಾದನೆ ಸಾಮಾಜಿಕ ಜಾಲತಾಣದಲ್ಲಿ ಹರಿಬಿಡಲಾಗಿರುವ ಸುಳ್ಳು ಸುದ್ದಿ ಎಂದೂ ಹೇಳಿದ್ದಾರೆ. ಆದರೆ, ರಾಜ್ಯ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಅಕ್ಟೋಬರ್ 15ರಂದು ಹೊರಡಿಸಿದ ಸುತ್ತೋಲೆಯಲ್ಲಿ KPS Magnet ಶಾಲೆಗಳೊಂದಿಗೆ ಸುತ್ತಲಿನ ಕಡಿಮೆ ದಾಖಲಾತಿಯ ಶಾಲೆಗಳನ್ನು ವಿಲೀನಗೊಳಿಸಬೇಕು ಎಂದು ಆದೇಶಿಸಿದೆ.



ಅಂತೆಯೇ, KPS ಶಾಲೆಯನ್ನಾಗಿ ಉನ್ನತೀಕರಿಸುತ್ತಿರುವ ಹಲವು ಶಾಲೆಗಳಿಗೆ ಸುತ್ತಲಿನ ಶಾಲೆಗಳನ್ನು ವಿಲೀನಗೊಳಿಸಿಸಬೇಕು ಎಂಬ ಆದೇಶವನ್ನು ಈಗಾಗಲೇ ಗ್ರಾಮ ಪಂಚಾಯಿತಿ ಮಟ್ಟದ ಹಲವು ಶಾಲೆಗಳಿಗೆ ನೀಡಲಾಗಿದೆ. ಅಧಿವೇಶನದಲ್ಲಿ ಸಚಿವರೇ ಹೇಳಿದಂತೆ, ಗ್ರಾಮ ಪಂಚಾಯಿತಿಗೊಂದರಂತೆ KPS Magnet ಶಾಲೆಗಳನ್ನು ತೆರೆಯಲಾಗುತ್ತದೆ, ಅಂದರೆ ತಮ್ಮದೇ ಇಲಾಖೆಯ ಆದೇಶದಂತೆ ಸರ್ಕಾರ ಮುಂದುವರೆಯುತ್ತಿದೆ.

ಈಗ ಮೂಡುವ ಪ್ರಶ್ನೆಯೆಂದರೆ, ಸರ್ಕಾರದ ಆದೇಶಗಳು ಹೇಳುವುದೇ ಒಂದು, ಮಂತ್ರಿಗಳ ಹೇಳಿಕೆ ಮತ್ತೊಂದು. ಜನ ಯಾವುದನ್ನು ನಂಬಬೇಕು? ಕನ್ನಡ ಶಾಲೆಯನ್ನು ಯಾವುದೇ ಕಾರಣಕ್ಕೂ ಮುಚ್ಚುವುದಿಲ್ಲ ಎಂಬ ಸಚಿವರ ಮಾತು ನಿಜವಾದಲ್ಲಿ, ಈ ಕೂಡಲೇ ರಾಜ್ಯ ಸರ್ಕಾರ ಈ ಹಿಂದೆ ನಮೂದಿಸಿರುವ ವಿಲೀನದ ಅಂಶವನ್ನು ಹಿಂಪಡೆಯಲಿ, ವಿಲೀನದ ಹೆಸರಿನಲ್ಲಿ ಕಡಿಮೆ ದಾಖಲಾತಿಯ ಶಾಲೆಗಳನ್ನು ಮುಚ್ಚುವುದಿಲ್ಲ ಎಂದು ಲಿಖಿತ ಆದೇಶ ಹೊರಡಿಸಲಿ ಎಂದು AIDSO ಜಿಲ್ಲಾ ಸಂಚಾಲಕಿ ಎಂ. ಶಾಂತಿ ಪತ್ರಿಕಾ ಹೇಳಿಕೆಯಲ್ಲಿ ಆಗ್ರಹಿಸಿದ್ದಾರೆ.

# ನಿಧನ

## ಶ್ರೀಕೃಷ್ಣ ಪದ್ಮನಾಭಾಚಾರ್ಯ ಹೊಂಬಾಳಿ



ಗದಗ: ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ, ಭಾರತೀಯ ಜನತಾ ಪಾರ್ಟಿಯ ನಿಷ್ಠಾವಂತ ಕಟ್ಟಾಳು ಶ್ರೀಕೃಷ್ಣ ಪದ್ಮನಾಭಾಚಾರ್ಯ ಹೊಂಬಾಳಿ (69) ಸೋಮವಾರ ಬೆಳಿಗ್ಗೆ ನಿಧನರಾಗಿದ್ದಾರೆ.

ಮೃತರು ಗದಗ-ಬೆಟಗೇರಿ ನಗರಸಭೆ ಸದಸ್ಯ ಸೇರಿದಂತೆ ಅಖಂಡ ಧಾರವಾಡ ಜಿಲ್ಲೆ ಭಾರತೀಯ ಜನತಾ ಪಾರ್ಟಿ ಜಿಲ್ಲಾಧ್ಯಕ್ಷರಾಗಿ, ಅಭಿನವ ಭಾರತ ಪ್ರತಿಷ್ಠಾನದ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಸಾಮಾಜಿಕ ಚಿಂತನೆ ಹೊಂದಿದ್ದ ಬ್ರಾಹ್ಮಣ ಸಮಾಜದ ಹಿರಿಯರಾಗಿದ್ದು, ತಮ್ಮ ಯೌವನಾವಸ್ಥೆಯಲ್ಲಿಯೇ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ವಿರೋಧ ವ್ಯಕ್ತಪಡಿಸಿ ಚಳುವಳಿಯಲ್ಲಿ ಪಾಲ್ಗೊಂಡು ಸಜೆ ಅನುಭವಿಸಿದ್ದರು.


ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದು, ಮೃತರ ಅಂತಿಮಕ್ರಿಯೆ ಸಂಜೆ ದುಃಖತಪ್ತ ವಾತಾವರಣದಲ್ಲಿ ಜರುಗಿತು.

**ಸಂತಾಪ:** ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಕಳಕಪ್ಪ ಬಂಡಿ, ಶಾಸಕರಾದ ಸಿ.ಸಿ. ಪಾಟೀಲ, ಎಸ್.ವ್ಹಿ. ಸಂಕನೂರ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ, ಶ್ರೀಕಾಂತ ಖಟವಟೆ, ಉಮೇಶಗೌಡ ಪಾಟೀಲ, ಶ್ರೀಪತಿ ಉಡುಪಿ, ಬಿ.ಎಚ್. ಲದ್ವಾ, ಮೋಹನ ಮಾಳಶೆಟ್ಟಿ, ತೋಂಟೋಸಾ ಭಾಂಡಗೆ, ರಮೇಶ ಹತ್ತಿಕಾಳ, ಸಂಗಮೇಶ ದುಂದೂರ, ಚಂದ್ರು ತಡಸದ, ಡಾ. ಶೇಖರ ಸಜ್ಜನರ, ಎಂ.ಎಸ್. ಕರಿಗೌಡ್ರ, ಮುಂತಾದವರು ಸಂತಾಪ ಸೂಚಿಸಿದ್ದಾರೆ.

# ಡಾ. ಅಂಬೇಡ್ಕರ್ ವ್ಯಕ್ತಿಯಲ್ಲ, ಅದ್ಭುತ ಶಕ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ನಾಡು ಕಂಡ ಶ್ರೇಷ್ಠ ವ್ಯಕ್ತಿ, ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಮಹಾಪರಿನಿರ್ವಾಣ ದಿನಾಚರಣೆಯ ನಿಮಿತ್ತ ದಲಿತ ಸಂಘರ್ಷ ಸಮಿತಿ, ಸಮಾನಮನಸ್ಕ ಬಳಗ, ಬಂಡಾಯ ಬಳಗ, ಮಾನವ ಬಂಧುತ್ವ ವೇದಿಕೆ ಹಾಗೂ ವಿವಿಧ ದಲಿತಪರ ಸಂಘಟನೆಗಳ ಸಹಕಾರದೊಂದಿಗೆ ಶನಿವಾರ ರಾತ್ರಿ ಪಂಜಿನ ಮೆರವಣಿಗೆ ಮಾಡುವ ಮೂಲಕ ವಿಶಿಷ್ಟವಾಗಿ ಆಚರಿಸಲಾಯಿತು.



ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪಂಜಿನ ಮೆರವಣಿಗೆ ನಡೆಸಿದ ಕಾರ್ಯಕರ್ತರು, ನಂತರ ಸಭೆ ನಡೆಸಿದರು. ಈ ವೇಳೆ ದಲಿತ ಮುಖಂಡರಾದ ಹನುಮಂತಪ್ಪ ನಂದೆಣ್ಣವರ, ಸುರೇಶ್ ನಂದೆಣ್ಣವರ, ಸೋಮಣ್ಣ ಯತ್ತಿನಹಳ್ಳಿ, ಬಸವಣ್ಣೆಪ್ಪ ನಂದೆಣ್ಣವರ ಮಾತನಾಡಿ, ಅಂಬೇಡ್ಕರ್ ವ್ಯಕ್ತಿಯಲ್ಲ, ಅವರೊಬ್ಬ ಅದ್ಭುತವಾದ ಶಕ್ತಿಯಾಗಿದ್ದಾರೆ. ಅವರು ರಚಿಸಿದ ಸಂವಿಧಾನವೇ ನಮಗೆಲ್ಲ ಶ್ರೀರಕ್ಷೆಯಾಗಿದೆ. ಜಗತ್ತಿನಲ್ಲಿಯೇ ವಿಶೇಷವಾದ ಸಂವಿಧಾನ ನಮ್ಮ ದೇಶದ್ದು ಎನ್ನುವ ಹೆಮ್ಮೆ ಪ್ರತಿಯೊಬ್ಬ ಭಾರತೀಯರಿಗಿದೆ. ಅವರ ಚಿಂತನೆ, ಸಮಾಜ ಪರಿವರ್ತನೆ ಮತ್ತು ಸಂವಿಧಾನದ ಮೌಲ್ಯಗಳ ಕುರಿತು ಅವರು ನೀಡಿದ ಸಂದೇಶಗಳೇ ಜೀವನದ ಏಳು-ಬೀಳುಗಳ ಬುನಾದಿಗಳಾಗಿವೆ ಎಂದರು.

ಈ ಸಂದರ್ಭದಲ್ಲಿ ರಾಮಪ್ಪ ಗಡದವರ್, ರಮೇಶ್ ಅಡುಗಿಮನಿ, ಫಕೀರೇಶ ಭಜಕ್ಕನವರ್, ಫಕ್ಕಿರೇಶ್ ನಂದೆಣ್ಣವರ್, ಹೊನ್ನಪ್ಪ ಸಂಜೀವಣ್ಣವರ್, ಮೋಹನ ನಂದೆಣ್ಣವರ, ದೇವಪ್ಪ ನಂದೆಣ್ಣವರ, ಸದಾನಂದ ನಂದೆಣ್ಣವರ್, ನಾಗಪ್ಪ ನಂದೆಣ್ಣವರ, ಮಹಾದೇವಪ್ಪ ಹಾದಿಮನಿ, ಮಹಾಂತೇಶ್ ಗುಡಸಲಮನಿ, ಹನುಮಂತಪ್ಪ ಹರಿಜನ, ಗುಡ್ಡಪ್ಪ ಮತ್ತೂರ, ಮಾತ್ರಾಂಡಪ್ಪ ಗಾಳೆಪ್ಪನವರ, ಮಹಾಂತೇಶ್ ಮುಶೆಪ್ಪನವರ, ಶೇಖರ ಹಂಜಗಿ, ಸತೀಶ್ ನಾರಾಯಣ್ಕರ, ದೇವರಾಜ್ ನಡವಲಕೇರಿ, ಅನಿಲ್ ಮುಳಗುಂದ, ನಾಗೇಶ್ ಅಮರಾಪುರ, ಬಸವರಾಜ ನಂದೆಣ್ಣವರ, ಮಂಜುನಾಥ ಗಡದವರ, ಪ್ರಮೋದ ಕರಾಟೆ ಮುಂತಾದವರಿದ್ದರು.

## ಜಾತ್ರಾ ಮಹೋತ್ಸವದ ಅಂಗವಾಗಿ ಸಾಮೂಹಿಕ ವಿವಾಹ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಹೂವಿನ ಶಿಗ್ಲಿ ಗ್ರಾಮದಲ್ಲಿನ ವಿರಕ್ತಮಠದಲ್ಲಿ ಜ. 15ರಂದು ನಡೆಯಲಿರುವ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀಮಠದಲ್ಲಿ ಸಾಮೂಹಿಕ ವಿವಾಹ ಜರುಗಲಿದ್ದು, ಆಸಕ್ತರು ಹೆಸರು ನೋಂದಾಯಿಸಿಕೊಳ್ಳಬೇಕೆಂದು ಶ್ರೀಮಠದ ಪ್ರಕಟಣೆ ವಿನಂತಿಸಿದೆ.



ಶ್ರೀ ಮಠದ ಮಠಾಧ್ಯಕ್ಷರಾದ ಚನ್ನವೀರ ಮಹಾಸ್ವಾಮಿಗಳವರ ನೇತೃತ್ವದಲ್ಲಿ ನಡೆಯುವ ಈ ಸಾಮೂಹಿಕ ವಿವಾಹದಲ್ಲಿ ಪಾಲ್ಗೊಳ್ಳುವ ವರನಿಗೆ 21 ವರ್ಷ ತುಂಬಿರಬೇಕು, ವಧುವಿಗೆ 18 ವರ್ಷ ತುಂಬಿರಬೇಕು.

ಇದರಲ್ಲಿ ಮರು ಮದುವೆಗೆ ಅವಕಾಶವಿರುವುದಿಲ್ಲ. ವರನು ಗ್ರಾಮ ಪಂಚಾಯಿತಿಯಿಂದ ಮೊದಲನೇ ಮದುವೆ ಎಂದು ಬರೆಸಿಕೊಂಡು ಬರಬೇಕು. ಜೊತೆಗೆ ಒಂದು ಫೋಟೋ, ಆಧಾರ್ ಕಾರ್ಡ್ ಜೆರಾಕ್ಸ್ ತರಬೇಕು. ವಧುವು ಶಾಲಾ ದಾಖಲಾತಿ, ಆಧಾರ್ ಕಾರ್ಡ್ ಜೆರಾಕ್ಸ್, ಒಂದು ಪ್ರತಿ ಫೋಟೋ ತರಬೇಕು. ಶ್ರೀಮಠದಿಂದ ವಧು-ವರರಿಗೆ ಬಾಸಿಂಗ, ದಂಡಿ ಮಾಲೆ ಹಾಗೂ ಸುರಗಿ ಕಾಯಿ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ 9538041989 ಹಾಗೂ 9742983190 ಸಂಪರ್ಕಿಸಲು ಕೋರಲಾಗಿದೆ.

### ರಾಜ್ಯ ಸರಕಾರದ ವಿರುದ್ಧ ವಿಶ್ವ ಹಿಂದೂ ಪರಿಷತ್ ಆರೋಪ

# ಸರ್ಕಾರ ಗೋಕಳ್ಳರ ರಕ್ಷಣೆಗೆ ನಿಂತಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗೋಹತ್ಯೆ ನಿಷೇಧ ಕಾಯಿದೆಗೆ ತಿದ್ದುಪಡಿ ತರುವ ಮೂಲಕ ರಾಜ್ಯ ಕಾಂಗ್ರೆಸ್ ಸರಕಾರ ಗೋವು ಕಳ್ಳರಿಗೆ ಸಹಕರಿಸುವ ನೀತಿಯನ್ನು ಅನುಸರಿಸುತ್ತಿದೆ ಎಂದು ಆರೋಪಿಸಿ ಸೋಮವಾರ ವಿಶ್ವ ಹಿಂದೂ ಪರಿಷತ್, ಭಜರಂಗದಳ ಹಾಗೂ ವಿವಿಧ ಹಿಂದೂಪರ ಸಂಘಟನೆಗಳ ಸದಸ್ಯರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ವಿಎಚ್‌ಪಿ ಜಿಲ್ಲಾಧ್ಯಕ್ಷ ಶ್ರೀಧರ ಕುಲಕರ್ಣಿ, ಸಿದ್ದರಾಮಯ್ಯ ನೇತೃತ್ವದ ಸರಕಾರ ಆಡಳಿತಕ್ಕೆ ಬಂದಾಗಿನಿಂದ ಒಂದಲ್ಲ ಒಂದು ರೀತಿಯಲ್ಲಿ ಹಿಂದೂ ಸಮಾಜಕ್ಕೆ ಕಿರುಕುಳ ನೀಡುತ್ತಲೇ ಬಂದಿದೆ. ಅದರ ಮುಂದುವರಿದ ಭಾಗವಾಗಿ ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ 'ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಹಾಗೂ ಸಂರಕ್ಷಣಾ ಕಾಯಿದೆ-2020'ನ್ನು ಸಡಿಲಗೊಳಿಸಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂಬ ವರದಿಗಳು ಆತಂಕ ಮೂಡಿಸುತ್ತಿದೆ ಎಂದರು.

ಪ್ರಸ್ತುತ ಜಾರಿಯಲ್ಲಿರುವ ಕಾಯಿದೆಯ ಸೆಕ್ಷನ್ 8ರ ಪ್ರಕಾರ, ಅಕ್ರಮ ಗೋಸಾಗಾಟದ ವೇಳೆ ಪೊಲೀಸರು ವಾಹನವನ್ನು ಜಪ್ತಿ ಮಾಡಿದರೆ, ಆ ವಾಹನವನ್ನು ತಾತ್ಕಾಲಿಕವಾಗಿ ಬಿಡಿಸಿಕೊಳ್ಳಲು ವಾಹನದ ಮೌಲ್ಯದಷ್ಟೇ ಮೊತ್ತದ ಬ್ಯಾಂಕ್ ಗ್ಯಾರಂಟಿ ನೀಡುವುದು ಕಡ್ಡಾಯವಾಗಿದೆ. ಉದಾಹರಣೆಗೆ, 5 ಲಕ್ಷ ರೂ. ಮೌಲ್ಯದ ವಾಹನವಿದ್ದರೆ, 5 ಲಕ್ಷ ರೂ.ಗಳ ಬ್ಯಾಂಕ್ ಗ್ಯಾರಂಟಿ ನೀಡಿದರಷ್ಟೇ ವಾಹನ ಬಿಡುಗಡೆಯಾಗುತ್ತದೆ. ಅಪರಾಧ ಸಾಬೀತಾದರೆ ಈ ಹಣ ಸರಕಾರಕ್ಕೆ ಮುಟ್ಟುಗೋಲಾಗುವ ಭಯವಿತ್ತು.

ಈ ತಿದ್ದುಪಡಿಯಿಂದಾಗಿ ಗೋವುಗಳ ಮೇಲಿನ ಹಿಂಸೆ ಹೆಚ್ಚಾಗಲಿದ್ದು, ಇದು ಹಿಂದೂಗಳ ಧಾರ್ಮಿಕ ಭಾವನೆಗೆ ತೀವ್ರ ಧಕ್ಕೆ ತರಲಿದೆ. ಸರಕಾರವೇ ಜನರನ್ನು ಉದ್ವಿಗ್ನಗೊಳಿಸಲು ಪ್ರಚೋದನೆ ನೀಡುತ್ತಿದೆ. ಅಕ್ರಮ ಗೋಸಾಗಾಟಗಾರರಿಗೆ ಅನುಕೂಲ ಮಾಡಿಕೊಡುವ ಈ ತಿದ್ದುಪಡಿಯನ್ನು ತಕ್ಷಣವೇ ಕೈಬಿಡಬೇಕು. ಒಂದು ವೇಳೆ ಬೆಳಗಾವಿ ಅಧಿವೇಶನದಲ್ಲಿ ಈ ತಿದ್ದುಪಡಿ ಮಸೂದೆಯನ್ನು ಮಂಡಿಸಿದರೆ, ಹಿಂದೂ ಸಮಾಜದ ನೇತೃತ್ವದಲ್ಲಿ ರಾಜ್ಯದಾದ್ಯಂತ ತಳಮಟ್ಟದಿಂದ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಶ್ರೀಧರ ಕುಲಕರ್ಣಿ ಎಚ್ಚರಿಕೆ ನೀಡಿದರು.

ಇದರಿಂದಾಗಿ ಅಕ್ರಮ ಸಾಗಾಟಕ್ಕೆ ಸಾಕಷ್ಟು ಕಡಿವಾಣ ಬಿದ್ದಿತ್ತು.

ಆದರೆ ಈಗ ರಾಜ್ಯ ಸರಕಾರವು ಗೋಕಳ್ಳರ ಮೇಲಿನ ಅತಿಯಾದ ಪ್ರೀತಿಯಿಂದ, ಅವರಿಗೆ ಬ್ಯಾಂಕ್ ಗ್ಯಾರಂಟಿ ಒದಗಿಸಲು ಕಷ್ಟವಾಗುತ್ತದೆ ಎಂಬ ಅಸಂಬದ್ಧ ನೆಪವೊಡ್ಡಿ, ಕೇವಲ ಸಾಲದ ಬಾಂಡ್ ಬರೆದುಕೊಟ್ಟರೆ ಸಾಕು ಎಂಬ ತಿದ್ದುಪಡಿ ತರಲು ಹೊರಟಿದೆ. ಇದು ಪರೋಕ್ಷವಾಗಿ ಸರಕಾರವು ಗೋಕಳ್ಳರ ಬೆಂಬಲಕ್ಕೆ ನಾವಿದ್ದೇವೆ ಎನ್ನುವ ಸಂದೇಶ ನೀಡಿದಂತಿದೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ವಿಎಚ್‌ಪಿ ಪ್ರಮುಖರಾದ ಸಂಜೀವ ಜೋಶಿ, ಲುಕ್ಕಣಸಾ ರಾಜೋಳಿ, ಎಂ.ಎಸ್. ಪವಾರ, ರಾಘವೇಂದ್ರ ವರ್ಣೇಕರ್, ಸುರೇಶ ಹಾದಿಮನಿ, ಕೆ.ಎಸ್. ಹಿರೇಮಠ, ಕೆ.ಕೆ. ಪರ್ವತಗೌಡ್ರ, ರೇವಣಸಿದ್ದಪ್ಪ ಗೊಡಚಪ್ಪನವರ, ಸುರೇಶ ಮರಳಪ್ಪನವರ ಇತರರು ಉಪಸ್ಥಿತರಿದ್ದರು.

## ಸ್ವಾತಂತ್ರ್ಯ ಬಂದು 79 ವರ್ಷಗಳ ನಂತರ 'ವಂದೇ ಮಾತರಂ' ಕುರಿತು ಚರ್ಚೆ ಏಕೆ? ಪ್ರಿಯಾಂಕಾ ಗಾಂಧಿ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಸೋಮವಾರ ಲೋಕಸಭೆಯಲ್ಲಿ 'ವಂದೇ ಮಾತರಂನ 150 ವರ್ಷಗಳು' ಕುರಿತ ಚರ್ಚೆಯಲ್ಲಿ ಭಾಗವಹಿಸಿದ್ದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ಭಾರತಕ್ಕೆ ಸ್ವಾತಂತ್ರ್ಯ ಬಂದು 79 ವರ್ಷಗಳ ನಂತರ, ಚರ್ಚಿಸಲು ಹೆಚ್ಚು ಮುಖ್ಯವಾದ ವಿಷಯಗಳಿರುವಾಗ, ಈ ಗೀತೆಯ ಕುರಿತು ಸದನ ಏಕೆ ಚರ್ಚೆ ನಡೆಸುತ್ತಿದೆ ಎಂದು ಪ್ರಶ್ನಿಸಿದರು.

"ನಾವು ಚರ್ಚಿಸುತ್ತಿರುವ ವಿಷಯವು ದೇಶದ ಆತ್ಮದ ಭಾಗವಾಗಿದೆ. ನಾವು ವಂದೇ ಮಾತರಂ ಬಗ್ಗೆ ಪ್ರಸ್ತಾಪಿಸಿದಾಗ, ಅದು ನಮ್ಮ ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ನೆನಪಿಸುತ್ತದೆ. ಈ ಚರ್ಚೆ ವಿಚಿತ್ರವಾಗಿದೆ; ಈ ಗೀತೆ ಜನರ ಹೃದಯದಲ್ಲಿ ಸ್ಥಾನ ಪಡೆದಿದೆ; ಹೀಗಿರುವಾಗ ಈ ಚರ್ಚೆಯ ಅಗತ್ಯವೇನಿದೆ?" ಎಂದು ಪ್ರಿಯಾಂಕಾ ಗಾಂಧಿ ಕೇಳಿದರು.

"ನಮ್ಮ ಗುರಿ ಏನು, ಜನರಿಗೆ ಸಂಬಂಧಿಸಿದಂತೆ ನಮ್ಮ ಜವಾಬ್ದಾರಿ ಏನು, ಅದನ್ನು ನಾವು ಹೇಗೆ ಪೂರೈಸುತ್ತಿದ್ದೇವೆ..? ನಾವು ಈ ರಾಷ್ಟ್ರೀಯ ಗೀತೆಯ ಬಗ್ಗೆ ಚರ್ಚಿಸುತ್ತಿರುವುದು ಏಕೆ? ಅದರ ಬಗ್ಗೆ ಏನು ಚರ್ಚೆ ಮಾಡಬಹುದು?" ಎಂದು ಪ್ರಿಯಾಂಕಾ ಗಾಂಧಿ ಪ್ರಶ್ನೆ ಎತ್ತಿದ್ದರು.

ಇತರ ಪ್ರಮುಖ ವಿಷಯಗಳಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಈ ಚರ್ಚೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಆರೋಪಿಸಿದರು. ಬಂಗಾಳದಲ್ಲಿ ಚುನಾವಣೆ ಸಮೀಪಿಸುತ್ತಿರುವುದರಿಂದ ಮತ್ತು ಪ್ರಧಾನ ಮಂತ್ರಿಗಳು ಅದರಲ್ಲಿ ತಮ್ಮ ಪಾತ್ರವನ್ನು ನಿರ್ವಹಿಸಲು ಬಯಸುತ್ತಿರುವುದರಿಂದ ನಾವು ಈ ಚರ್ಚೆಯನ್ನು ನಡೆಸುತ್ತಿದ್ದೇವೆ" ಎಂದು ಹೇಳಿದರು.



ಸರ್ಕಾರ ಈ ಚರ್ಚೆ ಹಮ್ಮಿಕೊಳ್ಳಲು ಎರಡನೆಯ ಕಾರಣವೆಂದರೆ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮತ್ತು ದೇಶಕ್ಕಾಗಿ ಅಪಾರ ತ್ಯಾಗ ಮಾಡಿದವರ ವಿರುದ್ಧ ಹೊಸ ಆರೋಪಗಳನ್ನು ಮಾಡಲು ಎಂದು ಪ್ರಿಯಾಂಕಾ ಗಾಂಧಿ ದೂರಿದರು.

"ಈ ಸರ್ಕಾರ ವರ್ತಮಾನ ಮತ್ತು ಭವಿಷ್ಯವನ್ನು ನೋಡಲು ಬಯಸುವುದಿಲ್ಲವಾದ್ದರಿಂದ ನಾವು ಭೂತಕಾಲವನ್ನು ಪರಿಶೀಲಿಸುತ್ತಲೇ ಇರಬೇಕೆಂದು ನೀವು ಬಯಸುತ್ತೀರಿ" ಎಂದರು. "ಪ್ರಧಾನಿ ಮೋದಿ ಅವರು ಹಿಂದಿನ ಪ್ರಧಾನಿಯಲ್ಲ; ಇದು ಅವರ ಆತ್ಮವಿಶ್ವಾಸ ಕಡಿಮೆಯಾಗುತ್ತಿದೆ ಮತ್ತು ಅವರ ನೀತಿಗಳು ದೇಶವನ್ನು ದುರ್ಬಲಗೊಳಿಸುತ್ತಿವೆ ಎಂದು ತೋರಿಸುತ್ತಿದೆ. ಸರ್ಕಾರದಲ್ಲಿರುವ ನನ್ನ ಸ್ನೇಹಿತರು ಮೌನವಾಗಿದ್ದಾರೆ, ಏಕೆಂದರೆ ಅವರಿಗೂ ಇದು ತಿಳಿದಿದೆ" ಎಂದು ಪ್ರಿಯಾಂಕಾ ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸಿದ ಪ್ರಿಯಾಂಕಾ, ಅವರ "ಆತ್ಮವಿಶ್ವಾಸ ಕಡಿಮೆಯಾಗುತ್ತಿದೆ ಮತ್ತು ನೀತಿಗಳು ದೇಶವನ್ನು ದುರ್ಬಲಗೊಳಿಸುತ್ತಿವೆ" ಎಂದು ಆರೋಪಿಸಿದರು.

ದೇಶದ ಮೊದಲ ಪ್ರಧಾನಿ ಜವಾಹರಲಾಲ್ ನೆಹರೂ ಅವರನ್ನು ಗುರಿಯಾಗಿಸಿಕೊಂಡಿದ್ದಕ್ಕಾಗಿ ಬಿಜೆಪಿಯನ್ನು ತರಾಟೆಗೆ ತೆಗೆದುಕೊಂಡ ಪ್ರಿಯಾಂಕಾ ಗಾಂಧಿ, ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದವರ ವಿರುದ್ಧ ಹೊಸ ಆರೋಪಗಳನ್ನು ಮಾಡಲು ಸರ್ಕಾರ ಈ ಚರ್ಚೆಯನ್ನು ಬಯಸುತ್ತಿದೆ ಎಂದು ಹೇಳಿದರು.

"ನೀವು ನೆಹರು ಬಗ್ಗೆ ಸದಾ ಮಾತನಾಡುತ್ತಿರುವುದರಿಂದ ಒಂದು ಕೆಲಸ ಮಾಡೋಣ. ಒಂದು ಚರ್ಚೆಗೆ ಸಮಯ ನಿಗದಿಪಡಿಸೋಣ. ನೆಹರು ವಿರುದ್ಧದ ಎಲ್ಲಾ ಆರೋಪಗಳನ್ನು ಪಟ್ಟಿ ಮಾಡೋಣ. ಅವುಗಳ ಕುರಿತು ಚರ್ಚೆ ನಡೆಸಿ, ವಿಷಯವನ್ನು ಅಲ್ಲಿಗೆ ಮುಗಿಸಿ ಬಿಡೋಣ. ಅದರ ನಂತರ, ಇಂದಿನ ಸಮಸ್ಯೆಗಳಾದ ಬೆಲೆ ಏರಿಕೆ ಮತ್ತು ನಿರುದ್ಯೋಗದ ಬಗ್ಗೆ ಮಾತನಾಡೋಣ" ಎಂದರು.

## ಪತ್ರಕರ್ತ ರಘು ಕೊಪ್ಪರ್‌ಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರದ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಪ್ರಶಸ್ತಿ ಪಡೆದ ಪತ್ರಕರ್ತ ರಘು ಕೊಪ್ಪರ ಮತ್ತು ಅವರ ಧರ್ಮಪತ್ನಿ ಶಿಲ್ಪಾ ಕೊಪ್ಪರ ಅವರಿಗೆ ರವೀಂದ್ರ ಕೊಪ್ಪರ ಅಭಿಮಾನಿ ಬಳಗದಿಂದ ಸನ್ಮಾನಿಸಲಾಯಿತು.

ಭಾರತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ. ಎಸ್.ವೈ. ಚಿಕ್ಕಟ್ಟಿ, ಹಾಲುಮತ ಮಹಾಸಭಾದ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಪ್ರೊ. ರಮಾಕಾಂತ ದೊಡ್ಡಮನಿ, ಶ್ರೀರಾಮ ಸೇನೆ ಮುಖ್ಯಸ್ಥ ರಾಜು ಖಾನಪ್ಪನವರ, ನಗರಸಭಾ ಸದಸ್ಯ ಅನಿಲ ಅಬ್ಬಿಗೇರಿ, ಪ್ರೊ. ವಿ.ಬಿ. ತಾಳಿ, ಅಮೀರ ನಾಯಕ, ಮಲ್ಲಿಕಾರ್ಜುನ ಖಂಡೆಮ್ಮನವರ, ಮೌನೇಶ ಭಜಂತ್ರಿ, ಸಂಡೂರಿನ ರವೀಂದ್ರ ಕುಲಕರ್ಣಿ, ವಾದಿರಾಜ ಕೌಜಲಗಿ, ಯಮುನವ್ವ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.

## ಆಕಸ್ಮಿಕ ಬೆಂಕಿ: ಬೆಳೆ ಹಾನಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಮಂಜಲಾಪೂರ ಗ್ರಾಮದಲ್ಲಿ ಮೆಕ್ಕೆಜೋಳದ ರಾಶಿಗಳಿಗೆ ಆಕಸ್ಮಿಕ ಬೆಂಕಿ ಹೊತ್ತಿಕೊಂಡ ಪರಿಣಾಮ 2-3 ರಾಶಿಗಳು ಸಂಪೂರ್ಣ ಸುಟ್ಟು ಭಸ್ಮವಾಗಿದ್ದು, ರೈತರಿಗೆ ಅಪಾರ ಹಾನಿ ಸಂಭವಿಸಿದೆ.

ಗ್ರಾಮದ ಸರ್ಕಾರಿ ಉರ್ದು ಶಾಲೆ ಎದುರಿನ ರೈತರ ಹೊಲಗಳಲ್ಲಿ ಮೆಕ್ಕೆಜೋಳ ಬೆಳೆದಿರುವ ಹತ್ತಾರು ರೈತರು ಒಕ್ಕಣಿಗಾಗಿ ಕಟಾವು ಮಾಡಿ ರಾಶಿ ಹಾಕಿದ್ದರು. ಆದರೆ ಆಕಸ್ಮಿಕವಾಗಿ ರಾಶಿಗಳಿಗೆ ಬೆಂಕಿ ಹತ್ತಿಕೊಂಡಿದ್ದರಿಂದ ಈ ಅನಾಹುತ ಸಂಭವಿಸಿದೆ. ಕಮಲವ್ವ ಹೊಸಮನಿ ಅವರಿಗೆ ಸೇರಿದ ಆರು ಎಕರೆಯಲ್ಲಿ ಬೆಳೆದಿದ್ದ ಮೆಕ್ಕೆಜೋಳ ಹಾಗೂ ಶಿರಾಜುದ್ದೀನ್ ಹೊಸಮನಿ ಅವರಿಗೆ ಸೇರಿದ 7 ಎಕರೆಯಲ್ಲಿ ಬೆಳೆದಿದ್ದ ಮೆಕ್ಕೆಜೋಳದ ರಾಶಿ ಸುಟ್ಟು ಕರಕಲಾಗಿದೆ. ಉಳಿದಂತೆ ಪರಮೇಶ ಕಿತ್ತಿ ಮತ್ತು ದಾನಪ್ಪ ಲಮಾಣಿ ಅವರಿಗೆ ಸೇರಿದ ಮೆಕ್ಕೆಜೋಳದ ಮೇವು ಭಸ್ಮವಾಗಿದೆ.

ಸುದ್ದಿ ತಿಳಿಯುತ್ತಲೇ ಅಗ್ನಿಶಾಮಕ ಸಿಬ್ಬಂದಿ ಧಾವಿಸಿ ಬೆಂಕಿ ಆರಿಸಿದರು. ಜೋರಾಗಿ ಗಾಳಿ ಬೀಸುತ್ತಿರುವುದರಿಂದ ಬೆಂಕಿ ಒಂದು ರಾಶಿಯಿಂದ ಮತ್ತೊಂದು ರಾಶಿಗೆ ವೇಗವಾಗಿ ಹರಡುತ್ತಿದ್ದು, ರಾಶಿ ಹಾಕಿರುವ ಉಳಿದ ರೈತರಲ್ಲಿ ಭಯ ಮೂಡಿಸಿತ್ತು.

**ತಹಶೀಲ್ದಾರ ಭೇಟಿ:** ವಿಷಯ ತಿಳಿಯುತ್ತಿದ್ದಂತೆ ತಹಸೀಲ್ದಾರ ಎಂ.ಧನಂಜಯ ಹಾಗೂ ಗ್ರಾಮ ಲೆಕ್ಕಾಧಿಕಾರಿಗಳಾದ ಎಸ್.ಕೆ. ಪಠಾಣ, ಬಸವರಾಜ ಹಳ್ಳಿಕೇರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

## ಪರಿಸರ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ಲಾಸ್ಟಿಕ್‌ನಂತಹ ವಿಷಕಾರಿ ವಸ್ತುಗಳು ನೈಸರ್ಗಿಕ ಸಂಪನ್ಮೂಲಗಳಾದ ಮಣ್ಣು, ನೀರು, ಗಾಳಿ ಇವುಗಳೊಂದಿಗೆ ಬೆರೆಯುವುದರಿಂದ ಮತ್ತು ಇನ್ನಿತರ ಹಾನಿಕಾರಕ ಪದಾರ್ಥಗಳು ಪರಿಸರದೊಂದಿಗೆ ಬೆರೆತು ಜೀವಿಗಳ ಆರೋಗ್ಯಕ್ಕೆ ಸಂಚಕಾರವನ್ನು ಉಂಟುಮಾಡಿ ಮಾರಣಾಂತಿಕ ಕಾಯಿಲೆಗಳಿಗೆ ನೂಕುತ್ತಿವೆ. ಆದ್ದರಿಂದ ಪ್ರತಿಯೊಬ್ಬರೂ ಪರಿಸರವನ್ನು ಜವಾಬ್ದಾರಿಯಿಂದ ರಕ್ಷಣೆ ಮಾಡಬೇಕು ಎಂದು ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಡಾ. ರಾಜೇಂದ್ರ ಎಸ್.ಗಡಾದ ಹೇಳಿದರು.



ಗದಗ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯದ ವತಿಯಿಂದ ಇಲ್ಲಿಯ ದಂಡಪ್ಪ ಮಾನ್ವಿ ಹೆರಿಗೆ ಆಸ್ಪತ್ರೆಯಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರೀಯ ಮಾಲಿನ್ಯ ನಿಯಂತ್ರಣ ದಿನಾಚರಣೆಯ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಪರಿಸರ ಮಾಲಿನ್ಯ ಜೀವಸಂಕುಲದ ಮೇಲೂ ಅಪಾರವಾದ ವ್ಯತಿರಿಕ್ತ ಪರಿಣಾಮವನ್ನು ಬೀರುತ್ತಿದೆ. ಇದು ಹಲವು ರೋಗಗಳಿಗೆ ಕಾರಣವಾಗಿದೆ. ಮುಂದಿನ ಪೀಳಿಗೆಗೆ ಉತ್ತಮ ಜೀವನ ನೀಡಲು ಉತ್ತಮ ಪರಿಸರ ಅಗತ್ಯವಾಗಿದ್ದು, ಮಾಲಿನ್ಯ ಮುಕ್ತ ಪರಿಸರಕ್ಕೆ ಸಾರ್ವಜನಿಕರು, ನಾಗರಿಕರು, ವಿದ್ಯಾರ್ಥಿಗಳು, ಮಹಿಳೆಯರು ಸ್ವಯಂ ಜಾಗೃತರಾಗಿ ಶ್ರಮಿಸಬೇಕಾಗಿದೆ ಎಂದರು.

ಕಾರ್ಯಕ್ರಮದ ವೇದಿಕೆಯಲ್ಲಿ ತಾಲೂಕಾ ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಸುಧಾ ಬೆಂತೂರ, ಗುಡದಪ್ಪ ಜಗ್ಗಿನ, ಭೂದೇಶ್ ಸಿದ್ದನಗೌಡರ ಉಪಸ್ಥಿತರಿದ್ದರು. ನಿರ್ಮಲ ಮರಿಗೌಡ ಪ್ರಾರ್ಥಿಸಿದರು. ಲೀಲಾವತಿ ಚಲವಾದಿ ಸ್ವಾಗತಿಸಿದರು. ಬಿ.ಎಸ್. ಸಿದ್ದನಗೌಡ ಕಾರ್ಯಕ್ರಮ ನಿರೂಪಿಸಿದರು, ಮೌಲಾನ ಸಿದ್ದಿ ವಂದಿಸಿದರು.

ಕಾರ್ಯಕ್ರಮದಲ್ಲಿ ತಾಲೂಕಿನ ವಿವಿಧ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಡಿ. 17ಕ್ಕೆ ಬೆಳಗಾವಿಯಲ್ಲಿ ಬೃಹತ್ ಹೋರಾಟ

**■ವಿಜಯಸಾಕ್ಷಿ ಸುದ್ದಿ, ಗದಗ**



ಸರ್ಕಾರ ತನ್ನ ಪ್ರಣಾಳಿಕೆಯಲ್ಲಿ ಮಾತು ಕೊಟ್ಟಂತೆ ಹಳೆ ಪಿಂಚಣಿ ಯೋಜನೆ ಜಾರಿ ಹಾಗೂ ಅನುದಾನಿತ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಡಿ. 17ರಂದು ಬೆಳಗಾವಿಯಲ್ಲಿ ಅಖಿಲ ಕರ್ನಾಟಕ ಹಾಗೂ ಪಿಂಚಣಿ ವಂಚಿತ ರಾಜ್ಯ ಅನುದಾನಿತ ಶಾಲಾ-ಕಾಲೇಜುಗಳ ನೌಕರರ ಸಂಘ ಬೃಹತ್ ಹೋರಾಟ ನಡೆಸಲಿದೆ ಎಂದು ಸಂಘಟನೆಯ ಗದಗ ಜಿಲ್ಲಾಧ್ಯಕ್ಷ ಬಸವರಾಜ ಎಚ್.ಕೊರ್ಲಹಳ್ಳಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಈ ಹೋರಾಟದಲ್ಲಿ ರಾಜ್ಯದಲ್ಲಿರುವ ಸಂಘಟನೆಯ ಎಲ್ಲ ಪದಾಧಿಕಾರಿಗಳು, ಸದಸ್ಯರು ಪಾಲ್ಗೊಳ್ಳಲಿದ್ದು, ಗದಗ ಜಿಲ್ಲಾ ಹಾಗೂ ಎಲ್ಲ ತಾಲೂಕು ಘಟಕಗಳ ಪದಾಧಿಕಾರಿಗಳು, ಸದಸ್ಯರು ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಗದಗ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಿಂದ ಅನುದಾನಿತ ಶಾಲಾ-ಕಾಲೇಜುಗಳ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಡಿ. 17ರಂದು ಮುಂಜಾನೆ ಬೆಳಗಾವಿಯ ಧಾರವಾಡ ನಾಕಾ ಬಳಿ ಸಂಘಟಿತರಾಗಿ ಹೋರಾಟವನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾ ಅಧ್ಯಕ್ಷ ಬಸವರಾಜ ಎಚ್.ಕೊರ್ಲಹಳ್ಳಿ ಹಾಗೂ ಪ್ರಧಾನ ಕಾರ್ಯದರ್ಶಿ ರವಿ ಕೋಟಿಯವರ ವಿನಂತಿಸಿದ್ದಾರೆ.

### ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ

# ಗ್ರಾಮ ಪಂಚಾಯತಿ ಉಸ್ತುವಾರಿಗಳ ನೇಮಕ

**■ವಿಜಯಸಾಕ್ಷಿ ಸುದ್ದಿ, ಗದಗ**

ಗ್ಯಾರಂಟಿ ಯೋಜನೆಗಳ ಸಂಪೂರ್ಣ, ಸಮರ್ಪಕ ನಿರ್ವಹಣೆಯನ್ನು ಪರಿಣಾಮಕಾರಿಯಾಗಿ ಗದಗ ತಾಲೂಕಿನಲ್ಲಿ ಜಾರಿಗೊಳಿಸುವ ದೃಷ್ಟಿಯಿಂದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕು ಸಮಿತಿಯ ಸದಸ್ಯರನ್ನು ತಾಲೂಕು ಮಟ್ಟದ ಜವಾಬ್ದಾರಿಯೊಂದಿಗೆ ಕೆಳಕಂಡ ಗ್ರಾಮ ಪಂಚಾಯಿತಿಗಳಿಗೆ ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಾಲೂಕಾಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.







ಗ್ರಾಮ ಪಂಚಾಯಿತಿಗಳಿಗೆ ಉಸ್ತುವಾರಿಗಳಾಗಿ ಕರ್ತವ್ಯ ನಿರ್ವಹಿಸಲು ದಯಾನಂದ ಪವಾರ ಅವರಿಗೆ ನಾಗಾವಿ ಮತ್ತು ಕಳಸಾಪುರ (ಮೊ-9980632306), ಸಂಗು ಕರಕಲಮಟ್ಟಿ ಅವರಿಗೆ ವಾರ್ಡ್ ನಂಬರ್ 19, 20, 22, 30 ಮತ್ತು 34 (ಮೊ-9148220894), ಎನ್.ಬಿ. ದೇಸಾಯಿ ಅವರಿಗೆ ಸೊರಟೂರ ಮತ್ತು ಬೆಳದಡಿ (ಮೊ-9972126009), ಸಂಗಮೇಶ ಹಾದಿಮನಿ ಅವರಿಗೆ ವಾರ್ಡ್ ನಂಬರ್ 3, 4, 5 ಮತ್ತು 6 (ಮೊ-9900236935), ರಮೇಶ ಹೊನ್ನಿನಾಯ್ಕರ ಅವರಿಗೆ ಹರ್ತಿ ಮತ್ತು ಯಲಿಶಿರುಂದ (ಮೊ-6366306230) ಉಸ್ತುವಾರಿಗಳನ್ನಾಗಿ ಕರ್ತವ್ಯ ನಿರ್ವಹಿಸಲು ತಿಳಿಸಲಾಗಿದೆ.


ಕರ್ನಾಟಕ ಸರಕಾರ

**ಪುರಸಭೆ ಕಾರ್ಯಾಲಯ ಮುಂಡರಗಿ-582118**

Website:www.mundargitown.gov.in Email: ka.mundargi.tmc@gmail
ದೂರವಾಣಿ:08371/262638

ಸಂಖ್ಯೆ: ಪುಸಮು/ಆ.ವಿ/ವಹಿ/2025-26 ದಿನಾಂಕ: 08.12.2025

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆಯ ಅಧಿನಿಯಮ 1999 ಮತ್ತು (ತಿದ್ದುಪಡಿ) 2001 ರಂತೆ ಇ-ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಣಿ ಮಾಡಿಸಿದ ಅರ್ಹರಿಂದ ಪುರಸಭೆಯ ಸಾಮಾನ್ಯ ನಿಧಿ ಅನುದಾನದಡಿಯಲ್ಲಿ ಬೀದಿ ನಾಯಿಗಳ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡುವ ಕುರಿತು. ಇಂಡೆಂಟ್ ನಂಬರ್ **DMA/2025-26/SE6817/** ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ (E-Procurment) ಟೆಂಡರ್ ಆಹ್ವಾನಿಸಲಾಗಿದೆ. ಸಂಪೂರ್ಣ ವಿವರಗಳಿಗಾಗಿ ಅಂತರ್ಜಾಲ ವಿಳಾಸ **https://kppp.karnataka.gov.in** / ದಲ್ಲಿ ತಿಳಿದುಕೊಳ್ಳಬಹುದಾಗಿದೆ.

| | | | |
|---|---|---|---|
| 1 | ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ | 15-12-2025 ರಂದು ಮುಂಜಾನೆ 11:00 ಗಂಟೆಗೆ | ಟೆಂಡರ್ ಮೊತ್ತ 4.95 ಲಕ್ಷ ರೂ.ಗಳು |
| 2 | ಬಿಡ್ ತೆರೆಯುವ ದಿನಾಂಕ | 17-12-2025 ರಂದು ಸಾಯಂಕಾಲ 4:00 ಗಂಟೆಗೆ | |

ಸಹಿ/- ಮುಖ್ಯಾಧಿಕಾರಿ ಪುರಸಭೆ ಮುಂಡರಗಿ

ಸಹಿ/- ಆಡಳಿತಾಧಿಕಾರಿ ಪುರಸಭೆ ಮುಂಡರಗಿ

ವಾ.ಸಾ.ಇ/ಗದಗ/442/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka